# ಪೊಲೀಸ್ ಇಲಾಖೆ

# POLCET-2021

## (ISO: 9001-2015 ಪ್ರಮಾಣಿತ ನೇಮಕಾತಿ ಪ್ರಕ್ರಿಯೆ)

**ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಗಳಲ್ಲಿ ಖಾಲಿಯಿರುವ ಅನುಯಾಯಿ (ಪುರುಷ) (ಮಿಕ್ಕುಳಿದ) ಮತ್ತು ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ಹುದ್ದೆಗಳನ್ನು ಒಳಗೊಂಡಂತೆ ಖಾಲಿ ಹುದ್ದೆಗಳ ನೇರ ನೇಮಕಾತಿ ಕುರಿತು.**

**ಅಧಿಸೂಚನೆ ಸಂಖ್ಯೆ:02/ನೇಮಕಾತಿ–4/2021–22**

ವಿಷಯ: **ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಗಳಲ್ಲಿ ಖಾಲಿಯಿರುವ ಅನುಯಾಯಿ (ಪುರುಷ) (ಮಿಕ್ಕುಳಿದ) ಮತ್ತು ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ಹುದ್ದೆಗಳನ್ನು ಒಳಗೊಂಡಂತೆ ಖಾಲಿ ಹುದ್ದೆಗಳ ನೇರ ನೇಮಕಾತಿ ಕುರಿತು.**

~*~*~*~

1. ಕರ್ನಾಟಕ ರಾಜ್ಯದ ಮೀಸಲು ಪೊಲೀಸ್ ಪಡೆಗಳಲ್ಲಿ ಖಾಲಿ ಇರುವ ಅನುಯಾಯಿ (ಪುರುಷ) (ಮಿಕ್ಕುಳಿದ) ಮತ್ತು ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ಹುದ್ದೆಗಳನ್ನು ಒಳಗೊಂಡಂತೆ ಖಾಲಿ ಹುದ್ದೆಗಳ ನೇರ ನೇಮಕಾತಿಗಾಗಿ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ (ವೃಂದ ಮತ್ತು ನೇಮಕಾತಿ) ನಿಯಮಗಳು 2020 ಹಾಗೂ ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ 2013, ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು 2013 ಹಾಗೂ ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 3 ಹೈಕಕೋ 2018, ದಿನಾಂಕ: 06.06.2020, ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 179 ಸೇನೆನಿ 2020, ದಿನಾಂಕ:06.07.2021 ಹಾಗೂ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 179 ಸೇನೆನಿ 2020, ದಿನಾಂಕ: 14.07.2021 ಮತ್ತು ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಾವಳಿ 1977, ಹಾಗೂ ತಿದ್ದುಪಡಿ ನಿಯಮ 2021 ಮತ್ತು ಮೇಲೆ ತಿಳಿಯಪಡಿಸಿದ ನಿಯಮಗಳಿಗೆ ಕಾಲಕಾಲಕ್ಕೆ ಆಗುವ ತಿದ್ದುಪಡಿಗಳ ಅನುಸಾರ ಈ ಅಧಿಸೂಚನೆಯನ್ನು ಪ್ರಕಟಿಸುತ್ತಾ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಅರ್ಜಿಗಳನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್ https://recruitment.ksp.gov.in ನಲ್ಲಿ ಆನ್–ಲೈನ್ (On-line) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು, ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.**

## ವಿಶೇಷ ಸೂಚನೆಗಳು:

ಎ) ಒಬ್ಬ ಅಭ್ಯರ್ಥಿಯು ಒಂದು ವೃತ್ತಿಗೆ ಮಾತ್ರ ಅರ್ಜಿ ಸಲ್ಲಿಸವುದು. ಒಂದಕ್ಕಿಂತ ಹೆಚ್ಚು ವೃತ್ತಿಗಳಿಗೆ ಅರ್ಜಿ ಸಲ್ಲಿಸಿದ್ದಲ್ಲಿ, ಅಂತಿಮವಾಗಿ ಸಲ್ಲಿಸಲಾದ ಅರ್ಜಿಯನ್ನು ಮಾತ್ರ ನೇಮಕಾತಿಗೆ ಪರಿಗಣಿಸಲಾಗುವುದು.

ಬಿ) ಅರ್ಜಿಯಲ್ಲಿ ಘಟಕವಾರು ಆದ್ಯತೆಯನ್ನು ತಪ್ಪದೇ ನಮೂದಿಸತಕ್ಕದ್ದು. ಅರ್ಹತೆ ಮತ್ತು ಮೀಸಲಾತಿ ಅನುಸಾರ ಆದ್ಯತೆಯನ್ನು ಪರಿಗಣಿಸಿ ಸ್ಥಳ ನಿಯುಕ್ತಿಗೊಳಿಸಲಾಗುವುದು.

ಸಿ)ಕಲ್ಯಾಣ ಕರ್ನಾಟಕ ಪ್ರದೇಶದ ವ್ಯಕ್ತಿಗಳು ಸ್ಥಳೀಯ ವೃಂದದ ಹುದ್ದೆ ಹಾಗೂ ಮಿಕ್ಕುಳಿದ ವೃಂದದ (ಪರಸ್ಥಳೀಯ) ಹುದ್ದೆ ಈ ಎರಡೂ ವೃಂದದ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

ಡಿ) ಒಂದು ವೇಳೆ ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ಅಭ್ಯರ್ಥಿಯು ಪ್ರಸ್ತುತ ನೇಮಕಾತಿಗೆ ಸಂಬಂಧಿಸಿದಂತೆ ಮಿಕ್ಕುಳಿದ (ಪರಸ್ಥಳೀಯ) ವೃಂದದ ಹುದ್ದೆಯನ್ನು ಆಯ್ಕೆ ಮಾಡಿಕೊಂಡು ನೇಮಕಾತಿ ಹೊಂದಿದಲ್ಲಿ ಅಂತಹ ಅಭ್ಯರ್ಥಿಯು ಜಾರಿಯಲ್ಲಿರುವ ನಿಯಮದಂತೆ ತನ್ನ ಸೇವಾ ಅವಧಿಯಲ್ಲಿ ಅನುಚ್ಛೇದ 371ಜೆ ಮೀಸಲಾತಿ ಸೌಲಭ್ಯಗಳನ್ನು ಪಡೆಯಲು ಅವಕಾಶವಿರುವುದಿಲ್ಲ ಎಂಬುದನ್ನು ಸ್ಪಷ್ಟೀಕರಿಸಲಾಗಿದೆ. ಅರ್ಜಿಯಲ್ಲಿ ತಪ್ಪದೇ ತಮ್ಮ ಆಯ್ಕೆಯನ್ನು ನಮೂದಿಸುವುದು.

ಇ) ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕವು ಮುಕ್ತಾಯವಾದ ನಂತರ 10 ದಿನಗಳ ಕಾಲಾವಕಾಶ ನೀಡಲಾಗುತ್ತಿದ್ದು, ಸದರಿ ದಿನಾಂಕದೊಳಗಾಗಿ ಅಭ್ಯರ್ಥಿಯು ತಾನು ಸಲ್ಲಿಸಿರುವ ಅರ್ಜಿಯಲ್ಲಿ ಹೆಸರು, ಜನ್ಮ ದಿನಾಂಕ, ಕೋರಿರುವ ಮೀಸಲಾತಿ ಹಾಗೂ ಇತರೇ ಯಾವುದೇ ಅಂಶಗಳ ಬದಲಾವಣೆ ಮಾಡಬೇಕಾದಲ್ಲಿ ಖುದ್ದಾಗಿ / ಅಂಚೆ ಮೂಲಕ ಸಂಬಂಧಪಟ್ಟ ದೃಢೀಕೃತ ದಾಖಲೆಗಳೊಂದಿಗೆ ಡೆಪ್ಯೂಟಿ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ನೇಮಕಾತಿ, ಕಾರ್ಲಟನ್ ಭವನ, ಅರಮನೆ ರಸ್ತೆ, ಬೆಂಗಳೂರು ರವರ ಕಛೇರಿಗೆ ಸಲ್ಲಿಸತಕ್ಕದ್ದು. ನಿಗಧಿಪಡಿಸಿದ ಕೊನೆಯ ದಿನಾಂಕದ ನಂತರ ಸಲ್ಲಿಸುವ ಯಾವುದೇ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.

ಎಫ್) ಅಭ್ಯರ್ಥಿಗಳು ಆನ್–ಲೈನ್ ಮೂಲಕ ಅರ್ಜಿ ಸಲ್ಲಿಸುವ ಸಮಯದಲ್ಲಿ ತಮ್ಮ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯ ಅಂಕಪಟ್ಟಿಯನ್ನು ತಪ್ಪದೇ ಅಪ್‌ಲೋಡ್ ಮಾಡುವುದು.

*** ಅರ್ಹ ಅಭ್ಯರ್ಥಿಗಳು "ಅನುಬಂಧ–ಅ" ರಲ್ಲಿ ನೀಡಲಾಗಿರುವ ಖಾಲಿ ಹುದ್ದೆಗಳ ವರ್ಗೀಕರಣವನ್ನು ನೋಡಿ ಅರ್ಜಿ ಸಲ್ಲಿಸುವಂತೆ ಸೂಚಿಸಲಾಗಿದೆ.**

2. **ಶುಲ್ಕ:**

| | |
|---|---|
| ಸಾಮಾನ್ಯ ಅರ್ಹತೆ, ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ | **₹. 250/-** |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಗಳಿಗೆ | **₹. 100/-** |

ನಿಗದಿತ ಶುಲ್ಕವನ್ನು ನಗದು / ಆನ್‌ಲೈನ್ ರೂಪದಲ್ಲಿ **ಸ್ಥಳೀಯ ಅಂಚೆ ಕಛೇರಿಗಳಲ್ಲಿ ಅಥವಾ ಹೆಚ್.ಡಿ.ಎಫ್.ಸಿ ಬ್ಯಾಂಕಿನ ಅಧಿಕೃತ ಶಾಖೆಗಳಲ್ಲಿ** ಪಾವತಿಸಿ ನಂತರ ಚಲನ್‌ನ 'ಅಭ್ಯರ್ಥಿ ಪ್ರತಿ'ಯನ್ನು ಇಟ್ಟುಕೊಂಡಿರತಕ್ಕದ್ದು.

**ಟಿಪ್ಪಣಿ:** ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ನೇಮಕಾತಿ ಸಮಿತಿಯು ನಡೆಸುವ ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಮೇಲಿನ ಕಾಲಂಗಳಲ್ಲಿ ನಮೂದಿಸಿದಂತೆ ಅಭ್ಯರ್ಥಿಗೆ ಅನ್ವಯಿಸುವ ಒಟ್ಟು ಪರೀಕ್ಷಾ ಶುಲ್ಕವನ್ನು **ಆನ್‌ಲೈನ್ /ನಗದು ರೂಪದಲ್ಲಿ ಚಲನ್ ನೊಂದಿಗೆ ಮಾತ್ರ ಮೇಲೆ ನಮೂದಿಸಿರುವ ಬ್ಯಾಂಕ್‌ಗಳಲ್ಲಿ ಮತ್ತು ಅಂಚೆ ಕಚೇರಿಯಲ್ಲಿ ಪಾವತಿಸತಕ್ಕದ್ದು. ಡಿಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.**

3. **ಆನ್–ಲೈನ್ (On-line) ಮುಖಾಂತರ ಅರ್ಜಿ ಸಲ್ಲಿಸುವ ಹಾಗೂ ಶುಲ್ಕ ಪಾವತಿಸುವ ವಿಧಾನ :**

ಅರ್ಜಿದಾರ ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅಧಿಕೃತ ವೆಬ್‌ಸೈಟ್‌ನಲ್ಲಿರುವ ಮಾಹಿತಿಸೂಚಿ/ ಸೂಚನೆಗಳನ್ನು ಜಾಗರೂಕತೆಯಿಂದ ಓದಿಕೊಂಡು ಭರ್ತಿ ಮಾಡಬೇಕು. ಇಲಾಖೆಯ ಅಧಿಕೃತ ವೆಬ್‌ಸೈಟ್ **https://recruitment.ksp.gov.in** ನಲ್ಲಿ ನೀಡಲಾಗಿರುವ ಸೂಚನೆಗಳನ್ನು ಓದಿಕೊಂಡು ಇರುವ ಅರ್ಜಿಯನ್ನು ಆನ್‌ಲೈನ್ ಮುಖಾಂತರ ಯಾವುದೇ ತಪ್ಪು ಮಾಹಿತಿಯನ್ನು ನೀಡದೇ ಭರ್ತಿ ಮಾಡತಕ್ಕದ್ದು. ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ, ಸದರಿ ಅರ್ಜಿಯಲ್ಲಿನ ತಪ್ಪು ಮಾಹಿತಿಯನ್ನು ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ ಹಾಗೂ ಅಂತಹವರ ವಿರುದ್ಧ ಕಾನೂನಿನನ್ವಯ ನೇಮಕಾತಿ ಸಮಿತಿಯು ಸೂಕ್ತ ಕ್ರಮ ಕೈಗೊಳ್ಳುವುದು. ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅರ್ಜಿದಾರ ಒಂದು ಬಿಳಿ ಹಾಳೆಯ ಮೇಲೆ ಪಾಸ್‌ಪೋರ್ಟ್ ಅಳತೆಯ ಬಣ್ಣದ ಭಾವಚಿತ್ರ, ಸಹಿ ಮತ್ತು ಅಧಿಸೂಚನೆಯ ಕ್ರಮ ಸಂಖ್ಯೆ 8(ಬಿ)ರಲ್ಲಿ ನಮೂದಿಸಲಾಗಿರುವ ಯಾವುದಾದರು ಗುರುತಿನ ಚೀಟಿಯನ್ನು ಪ್ರತ್ಯೇಕವಾಗಿ (Soft Copy - less than 250 KB) ಸ್ಕ್ಯಾನ್ ಮಾಡಿಟ್ಟುಕೊಂಡಿರಬೇಕು. ನಂತರ ಅರ್ಜಿದಾರನ ಹೆಸರು, ಜಾತಿ, ಮೀಸಲಾತಿಗಳ ವಿವರ, ಹುಟ್ಟಿದ ದಿನಾಂಕ ಮತ್ತು ಇತ್ಯಾದಿ ವಿವರಗಳನ್ನು ಭರ್ತಿ ಮಾಡಿ ಕೊನೆಯದಾಗಿ ಸ್ಕ್ಯಾನ್ ಮಾಡಿಟ್ಟುಕೊಂಡಿರುವ ಭಾವಚಿತ್ರ, ಸಹಿ ಮತ್ತು ಗುರುತಿನ ಚೀಟಿಯನ್ನು ಕಂಪ್ಯೂಟರ್ ಮುಖೇನ ಅಪ್‌ಲೋಡ್ (Upload) ಮಾಡುವುದು. ಇಲ್ಲವಾದಲ್ಲಿ ಅಂತಹ ಅರ್ಜಿದಾರರು ಆನ್‌ಲೈನ್‌ನಲ್ಲಿ ಅರ್ಜಿಯನ್ನು ತುಂಬಿ ಮುಂದುವರೆಯಲು ಸಾಧ್ಯವಾಗುವುದಿಲ್ಲ. ಅರ್ಜಿದಾರ ನೀಡಿರುವ ವಿವರಗಳು ಎಲ್ಲಾ ರೀತಿಯಿಂದಲೂ ಸಮರ್ಪಕವಾಗಿದ್ದಲ್ಲಿ ಮಾತ್ರ ಚಲನ್ ಮುದ್ರಿಸಬಹುದು. ಚಲನ್ ಮುದ್ರಿಸಲು ಜನರೇಟ್ ಚಲನ್ ಬಟನ್ ಮೇಲೆ ಕ್ಲಿಕ್ ಮಾಡಿದಾಗ ತ್ರಿಪತಿ (Triplicate) ಬ್ಯಾಂಕ್ / ಅಂಚೆ ಕಚೇರಿ ಚಲನ್ ಸೃಜನೆಯಾಗುತ್ತದೆ. ಆ ಚಲನ್‌ನಲ್ಲಿ ಅರ್ಜಿಯ ಸಂಖ್ಯೆಯೊಂದಿಗೆ, ಆಯ್ಕೆ ಮಾಡಿರುವ ವೃತ್ತಿ, ನಿಮ್ಮ ಭಾವಚಿತ್ರ, ಪ್ರವರ್ಗ, ಮೀಸಲಾತಿಗಳ ವಿವರ ಮತ್ತು ಪಾವತಿಸಬೇಕಾಗಿರುವ ನಿಗದಿತ ಶುಲ್ಕಗಳ ವಿವರಗಳು ಇರುತ್ತವೆ. ಆ ಚಲನ್ ಪ್ರತಿಯನ್ನು ಮುದ್ರಿಸಿ/ಪ್ರಿಂಟ್ ಮಾಡಿಕೊಳ್ಳತಕ್ಕದ್ದು.

ನಂತರ ಅರ್ಜಿದಾರ ಮುದ್ರಿಸಿಕೊಳ್ಳಲಾದ ಚಲನ್‌ನಲ್ಲಿ ನಮೂದಾಗಿರುವ ಒಟ್ಟು ಶುಲ್ಕವನ್ನು **ಸ್ಥಳೀಯ ಅಂಚೆ ಕಛೇರಿಗಳಲ್ಲಿ ಅಥವಾ ಹೆಚ್.ಡಿ.ಎಫ್.ಸಿ ಬ್ಯಾಂಕಿನ ಅಧಿಕೃತ ಶಾಖೆಗಳಲ್ಲಿ ಆನ್‌ಲೈನ್ / ನಗದು ರೂಪದಲ್ಲಿ ಪಾವತಿಸಿ ನಂತರ ಚಲನ್‌ನ 'ಅಭ್ಯರ್ಥಿ ಪ್ರತಿ'ಯನ್ನು ಇಟ್ಟುಕೊಂಡಿರತಕ್ಕದು.**

ಅಭ್ಯರ್ಥಿಯು ಶುಲ್ಕ ಪಾವತಿಸಿದ ಎರಡು ದಿನಗಳ ನಂತರ ಪುನ: ಇಲಾಖೆಯ ಅಧಿಕೃತ ವೆಬ್‌ಸೈಟ್ **https://recruitment.ksp.gov.in** ನಲ್ಲಿ Recruitment → Online Recruitment Application → My application ನ್ನು ಕ್ಲಿಕ್ ಮಾಡಿ, ತಮ್ಮ ಅರ್ಜಿ ಸಂಖ್ಯೆ ಮತ್ತು ಜನ್ಮ ದಿನಾಂಕ ನಮೂದಿಸಿದ ನಂತರ ಅರ್ಜಿ ತೆರೆಯುತ್ತದೆ ಹಾಗೂ ಅಭ್ಯರ್ಥಿಯು ಭರ್ತಿ ಮಾಡಿರುವ ಎಲ್ಲಾ ವಿವರಗಳನ್ನು ಒಳಗೊಂಡಂತೆ ಅರ್ಜಿಯು ಸೃಜನೆಯಾಗುತ್ತದೆ. ಸದರಿ

ಅರ್ಜಿಯ ಪ್ರತಿಯನ್ನು ಪ್ರಿಂಟ್ ಮಾಡಿಟ್ಟುಕೊಳ್ಳತಕ್ಕದ್ದು. ಅರ್ಜಿ ಪ್ರತಿ ಮತ್ತು ಅರ್ಜಿ ಸಂಖ್ಯೆಯು ಮುಂದಿನ ನೇಮಕಾತಿ ಪ್ರಕ್ರಿಯೆಯ ಎಲ್ಲಾ ಹಂತಗಳಿಗೆ ಅವಶ್ಯಕವಾಗಿರುತ್ತದೆ.

- **ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ: 30.07.2021 ಬೆಳಿಗ್ಗೆ 10.00 ಗಂಟೆಯಿಂದ**
- **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 30.08.2021 ಸಂಜೆ 06.00 ಗಂಟೆಯವರೆಗೆ**
- **ಅಧಿಕೃತ ಬ್ಯಾಂಕ್ ಶಾಖೆಗಳ / ಅಂಚೆ ಕಛೇರಿ ವೇಳೆಯಲ್ಲಿ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ: 01.09.2021**

**ಸೂಚನೆಗಳು:**

a) ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ನೀಡಲಾಗಿರುವ ಅರ್ಜಿಯನ್ನು ಭರ್ತಿ ಮಾಡಿ, ನಿಗದಿತ ದಿನಾಂಕದೊಳಗೆ ಸಲ್ಲಿಸಲಾಗುವ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು.

b) ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ (Help line) 080–22943346 ಅನ್ನು ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು. ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ತೊಂದರೆ ಎದುರಾದಲ್ಲಿ ಅದನ್ನು ಸ್ಥಗಿತಗೊಳಿಸಿ ಮತ್ತೊಮ್ಮೆ ಅಧಿಕೃತ ವೆಬ್‌ಸೈಟ್‌ನಲ್ಲಿ ನೀಡಲಾಗಿರುವ ಅರ್ಜಿಯನ್ನು ಭರ್ತಿ ಮಾಡಲು ತಿಳಿಸಲಾಗಿದೆ.

**ಟಿಪ್ಪಣಿ:–ಈ ಕೆಳಗೆ ನಮೂದಿಸಿರುವ ಖಾಲಿ ಹುದ್ದೆಗಳ ಸಂಖ್ಯೆ ತಾತ್ಕಾಲಿಕವಾಗಿದ್ದು, ಅನಿವಾರ್ಯ ಸಂದರ್ಭದಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ.**

**ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಗಳಲ್ಲಿ ನೇರ ನೇಮಕಾತಿಯಡಿ ಖಾಲಿಯಿರುವ ಅನುಯಾಯಿ (ಪುರುಷ) ಹುದ್ದೆಗಳ ವಿವರ:**

| ಕ್ರ. ಸ. | ಪಡೆ | ವೃತ್ತಿವಾರು ಅನುಯಾಯಿ ಹುದ್ದೆಗಳು | | | | | |
|---|---|---|---|---|---|---|---|
| | | ಅಡುಗೆಯವರು | ಕ್ಷೌರಿಕ | ಧೋಭಿ | ಕಸ ಗುಡಿಸುವವರು | ನೀರು ತರುವವರು | ಒಟ್ಟು ಹುದ್ದೆಗಳು |
| 1 | 1ನೇ ಪಡೆ, ಕೆ.ಎಸ್.ಆರ್.ಪಿ, ಬೆಂಗಳೂರು. | 09 | 06 | 05 | 05 | - | 25 |
| 2 | 5ನೇ ಪಡೆ, ಕೆ.ಎಸ್.ಆರ್.ಪಿ, ಮೈಸೂರು. | 08 | 08 | 07 | 07 | - | 30 |
| 3 | 6ನೇ ಪಡೆ, ಕೆ.ಎಸ್.ಆರ್.ಪಿ, ಕಲಬುರಗಿ. | 09 | 04 | 04 | 08 | - | 25 |
| 4 | 7ನೇ ಪಡೆ, ಕೆ.ಎಸ್.ಆರ್.ಪಿ, ಮಂಗಳೂರು. | 13 | 09 | 11 | 13 | - | 46 |
| 5 | 10ನೇ ಪಡೆ, ಕೆ.ಎಸ್.ಆರ್.ಪಿ, ಶಿಗ್ಗಾವಿ. | 15 | 12 | 12 | 11 | - | 50 |
| 6 | 12ನೇ ಪಡೆ, ಕೆ.ಎಸ್.ಆರ್.ಪಿ, ತುಮಕೂರು. | 27 | 06 | 14 | 14 | 13 | 74 |
| ಒಟ್ಟು | | **81** | **45** | **53** | **58** | **13** | **250** |

**4. <u>ಅರ್ಹತಾ ಷರತ್ತುಗಳು</u> :**

a) ಭಾರತೀಯ ನಾಗರಿಕನಾಗಿರತಕ್ಕದ್ದು.

b) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

c) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

**5. <u>ವಯೋಮಿತಿ</u> :**

ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಂದರೆ 30.08.2021 ಕ್ಕೆ ಅಭ್ಯರ್ಥಿಗೆ ಕನಿಷ್ಠ 18 ವರ್ಷ ವಯಸ್ಸಾಗಿರಬೇಕು ಹಾಗೂ ಈ ಕೆಳಕಂಡ ವಯಸ್ಸು ಮೀರಿರಬಾರದು.

a) **ಸಾಮಾನ್ಯ ಪುರುಷ ಅಭ್ಯರ್ಥಿಗಳಿಗೆ:**

i) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ 35 ವರ್ಷಗಳು.

ii) ಇತರೆ ಅಭ್ಯರ್ಥಿಗಳಿಗೆ 30 ವರ್ಷಗಳು.

**b) ಮಾಜಿ ಸೈನಿಕ ಅಭ್ಯರ್ಥಿಗಳಿಗೆ :**

ಮಾಜಿ ಸೈನಿಕ ಅಭ್ಯರ್ಥಿಯು ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದುಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿದ ಕಾರಣದಿಂದ ಬಿಡುಗಡೆಯಾದ ಮಾಜಿ ಯೋಧರಾಗಿದ್ದಲ್ಲಿ "ಅವರು ಸೇವೆ ಸಲ್ಲಿಸಿದ ಅವಧಿ" ಯ ಜೊತೆಗೆ ಹೆಚ್ಚುವರಿ 03 ವರ್ಷಗಳ ರಿಯಾಯಿತಿಗಳನ್ನು ನೀಡಲಾಗುವುದು. ಮಾಜಿ ಯೋಧ ಎಂಬ ಶಬ್ದವು ಚಾಲ್ತಿಯಲ್ಲಿರುವ ಸಂಬಂಧಿಸಿದ ನಿಯಮಾವಳಿಗಳಲ್ಲಿನ ಪರಿಭಾಷೆಯ ಅರ್ಥ ಹೊಂದಿದೆ.

**c) ಮಾಜಿ ಸೈನಿಕರ ಬಗ್ಗೆ ವಿವರಣೆ:**

ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂಸೇನೆ, ನೌಕಾಸೇನೆ ಮತ್ತು ವಾಯುಸೇನೆಯಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧರಲ್ಲದ ಹುದ್ದೆಗಳಲ್ಲಿ) ಸೇವೆ ಸಲ್ಲಿಸಿದ ವ್ಯಕ್ತಿ. ಆದರೆ ಡಿಫೆನ್ಸ್ ಸೆಕ್ಯುರಿಟಿ ಕೋರ್ (Defence Security Corps), ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್ (General Reserved Engineering Force), ಲೋಕ್ ಸಹಾಯಕ್ ಸೇನಾ (Lok Sahayak Sena) ಮತ್ತು ಪ್ಯಾರಾ ಮಿಲಿಟರಿ ದಳ (Para Military Forces) ದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ: ಮತ್ತು

(i) ಅಂತಹ ಸೇನೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

**ಅಥವಾ**

(ii) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು.

**ಅಥವಾ**

(iii) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

**ಅಥವಾ**

(iv) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:

ಅ) ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.

ಆ) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.

ಇ) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

**ವಿವರಣೆ:** ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರಿಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.

v) ಕೆ.ಸಿ.ಎಸ್. (ಸಾಮಾನ್ಯ ನೇಮಕಾತಿ) ನಿಯಮ 9(1) ರನ್ವಯ ಕೇಂದ್ರ ಸಶಸ್ತ್ರದಳದಲ್ಲಿ ಸೇವೆ ಸಲ್ಲಿಸುವಾಗ ಹತರಾದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಮಾಜಿ ಸೈನಿಕ ಮಕ್ಕಳಿಗೆ ವಯೋಮಿತಿ ಸಡಿಲಿಕೆ, ಸಹಿಷ್ಣುತೆ ಪರೀಕ್ಷೆ ಹಾಗೂ ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಯಾವುದೇ ತರಹದ ವಿನಾಯಿತಿಯನ್ನು ನೀಡಲಾಗುವುದಿಲ್ಲ. ಕರ್ತವ್ಯ ನಿರ್ವಹಿಸುತ್ತಿದ್ದ ಕೇಂದ್ರ ಸಶಸ್ತ್ರದಳದ ಅಧಿಕಾರಿಗಳಿಂದ ಅವಲಂಬಿತ ಪ್ರಮಾಣ ಪತ್ರ ಮತ್ತು ಸೈನಿಕ ಬೋರ್ಡ್‌ನಿಂದ ಪ್ರಮಾಣ ಪತ್ರವನ್ನು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ **ದಿನಾಂಕ: 30.08.2021** ರೊಳಗಾಗಿ ಪಡೆದಿಟ್ಟುಕೊಂಡಿರತಕ್ಕದ್ದು.

**ಟಿಪ್ಪಣಿ:** ಮೇಲಿನ ಷರತ್ತಿನ ಪ್ರಕಾರ ಮಾಜಿ ಸೈನಿಕ ಮೀಸಲಾತಿ ಕೋರುವ ಅಭ್ಯರ್ಥಿಗಳು ನಿಯಮಾನುಸಾರ ಆ ಮೀಸಲಾತಿಗೆ ಅರ್ಹರೇ? ಎಂಬುದನ್ನು ಹತ್ತಿರದ ಜಿಲ್ಲಾ ಸೈನಿಕ ಬೋರ್ಡ್‌ನಿಂದ ತಿಳಿದುಕೊಂಡು ಮೀಸಲಾತಿಯನ್ನು ಕೋರುವುದು ಸೂಕ್ತ.

## 6. ವಿದ್ಯಾರ್ಹತೆ:

ಕರ್ನಾಟಕ ರಾಜ್ಯ ಮೀಸಲು ಪೊಲೀಸ್ (ವೃಂದ ಮತ್ತು ನೇಮಕಾತಿ) ನಿಯಮ 2020 ರ ಪ್ರಕಾರ ಅನುಯಾಯಿ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ, ಅಂದರೆ 30.08.2021 ಕ್ಕೆ ಹೊಂದಿರಬೇಕು. (ಮಾಜಿ ಸೈನಿಕ ಅಭ್ಯರ್ಥಿಗಳು ವಿದ್ಯಾರ್ಹತೆಯ ಪ್ರಮಾಣ ಪತ್ರವನ್ನು ದಿನಾಂಕ:30.08.2021 ರೊಳಗೆ ಹೊಂದಿದ್ದರೆ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಮಾತ್ರ ಪರಿಗಣಿಸಲಾಗುವುದು).

- **ಸರ್ಕಾರದ ಸುತ್ತೋಲೆ ಸಂಖ್ಯೆ : ಸಿಆಸುಇ 81 ಸೇವನೆ 2017, ದಿನಾಂಕ:27.02.2018 ರಲ್ಲಿ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್‌ಎಸ್‌ಎಲ್‌ಸಿ ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳು ಈ ಕೆಳಕಂಡಂತಿರುತ್ತದೆ.**
    1. **ಸಿ.ಬಿ.ಎಸ್.ಇ ಮತ್ತು ಐ.ಎಸ್.ಸಿ ಮಂಡಳಿಯು ನಡೆಸುವ ಕ್ಲಾಸ್ 10 ಪರೀಕ್ಷೆ.**
    2. **ಇತರೆ ರಾಜ್ಯ ಸರ್ಕಾರದ ಪರೀಕ್ಷಾ ಮಂಡಳಿಗಳಿಂದ ನಡೆಸುವ ಕ್ಲಾಸ್ 10 ಪರೀಕ್ಷೆ.**
    3. **ನ್ಯಾಷನಲ್ ಇನ್ಸ್‌ಸ್ಟಿಟೂಟ್ ಆಫ್ ಓಪನ್ ಸ್ಕೂಲಿಂಗ್(ಎನ್.ಐ.ಓ.ಎಸ್) ವತಿಯಿಂದ ನಡೆಸುವ ಪ್ರೌಢ ಶಿಕ್ಷಣ ಮಟ್ಟದ ಕೋರ್ಸ್.**
    4. **ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಪ್ರೌಢ ಶಿಕ್ಷಣ ಮಟ್ಟದ ಕೋರ್ಸ್ (ಕೆ.ಓ.ಎಸ್.)**

**ಟಿಪ್ಪಣಿ :**

a) ಮೇಲೆ ನಮೂದಿಸಿದಂತೆ ವಿದ್ಯಾರ್ಹತೆಯನ್ನು ಹೊಂದದೇ ಇರುವ ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದರೆ ನಂತರ ನೇಮಕಾತಿ ಸಮಿತಿಗೆ ವಿದ್ಯಾರ್ಹತೆ ಹೊಂದಿರುವುದಿಲ್ಲವೆಂದು ಪತ್ತೆಯಾದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಯಾವುದೇ ಹಂತದಲ್ಲಾದರೂ ರದ್ದುಪಡಿಸಲಾಗುವುದು.

b) ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನಿಗದಿತ ವಿದ್ಯಾರ್ಹತೆ ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ. ಮೇಲಿನ ವಿದ್ಯಾರ್ಹತೆಯನ್ನು ಹೊರತುಪಡಿಸಿ ಬೇರೆ ಯಾವ ವಿದ್ಯಾರ್ಹತೆಯನ್ನೂ ಪರಿಗಣಿಸಲಾಗುವುದಿಲ್ಲ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 30.08.2021 ರೊಳಗೆ ಎಲ್ಲಾ ಅಭ್ಯರ್ಥಿಗಳು ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿಯನ್ನು ಹೊಂದಿರಬೇಕು.

## 7. ಖಾಯಂ ಪೂರ್ವ ಅವಧಿ ಮತ್ತು ವೇತನ ಶ್ರೇಣಿ :

a) **ಖಾಯಂ ಪೂರ್ವ ಅವಧಿ:** ಕರ್ನಾಟಕ ನಾಗರೀಕ ಸೇವಾ (ಪ್ರೊಬೇಷನರಿ) ನಿಯಮಗಳು 1977 ರನ್ವಯ ನೇರ ನೇಮಕಾತಿ ಮೂಲಕ ಆಯ್ಕೆಗೊಂಡ ಅಭ್ಯರ್ಥಿಗಳು ಎರಡು ವರ್ಷ ಖಾಯಂ ಪೂರ್ವ ಅವಧಿಯಲ್ಲಿರುತ್ತಾರೆ.

b) **ವೇತನ ಶ್ರೇಣಿ:**

**₹.** 18600–450–20400–500–22400–550–24600–600–27000–650–29600–750–32600.

c) **ಪಿಂಚಣಿ ಸೌಲಭ್ಯ :**

ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ(ಎಸ್‌ಪಿಎಲ್) 04 ಪಿಇಟಿ 2005, ದಿನಾಂಕ:31.03.2006 ರಂತೆ ನೂತನ ಅಂಶದಾಯಿ ಪಿಂಚಣಿ ಸೌಲಭ್ಯ ಅನ್ವಯವಾಗುವುದು.

## 8. ದೇಹದಾರ್ಢ್ಯತೆ ಪರೀಕ್ಷೆ (Physical Standard Test):

| | |
|---|---|
| ಎಲ್ಲಾ ಸಾಮಾನ್ಯ ಪುರುಷ ಅಭ್ಯರ್ಥಿಗಳಿಗೆ ಮತ್ತು ಮಾಜಿ ಸೈನಿಕ ಅಭ್ಯರ್ಥಿಗಳಿಗೆ | ***ಕನಿಷ್ಠ ಎತ್ತರ*** : 170 ಸೆಂ. ಮೀ.<br>***ಕನಿಷ್ಠ ಎದೆ ಸುತ್ತಳತೆ*** :86 ಸೆಂ. ಮೀ (ಪೂರ್ತಿ ವಿಸ್ತರಿಸಿದಾಗ)<br>ಕನಿಷ್ಠ ವಿಸ್ತರಣೆ 5 ಸೆಂ. ಮೀ. |

| | |
|---|---|
| ಕರ್ನಾಟಕ ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ಬುಡಕಟ್ಟು ಪುರುಷ ಅಭ್ಯರ್ಥಿಗಳಿಗೆ | ***ಕನಿಷ್ಠ ಎತ್ತರ*** : 155 ಸೆಂ. ಮೀ.<br>***ಎದೆ ಸುತ್ತಳತೆ*** : 75 ಸೆಂ. ಮೀ (ಪೂರ್ತಿ ವಿಸ್ತರಿಸಿದಾಗ)<br>ಕನಿಷ್ಠ ವಿಸ್ತರಣೆ 5 ಸೆಂ. ಮೀ. |

**ಟಿಪ್ಪಣಿ:**

**"ಬುಡಕಟ್ಟು ಜನಾಂಗ"** ಎಂದರೆ **"**ಉತ್ತರ ಕನ್ನಡ ಕಾರವಾರ, ದಕ್ಷಿಣ ಕನ್ನಡ ಮಂಗಳೂರು, ಉಡುಪಿ, ಚಿಕ್ಕಮಗಳೂರು, ಶಿವಮೊಗ್ಗ, ಕೊಡಗು, ಚಾಮರಾಜನಗರ ಮತ್ತು ಮೈಸೂರು ಅರಣ್ಯಗಳಲ್ಲಿ ಸಿದ್ದಿಗರು, ಜೇನುಕುರುಬ, ಕಾಡುಕುರುಬ, ಯೆರವ, ಸೋಲಿಗ, ಕುಡಿಯ, ಗೌಡ್ಲು, ಹಸಲರು, ಮಲೈಕುಡಿಯ ಮತ್ತು ಕೊರಗ ಬುಡಕಟ್ಟು ಸಮುದಾಯಗಳಿಗೆ ಸೇರಿದ ಅಭ್ಯರ್ಥಿಗಳು**"**.

ಈ ಮೇಲಿನ ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯಥಿಗಳು ಈ ಕೆಳಕಂಡ ಸಹಿಷ್ಣುತೆ ಪರೀಕ್ಷೆಗೆ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ.

a) **ಸಹಿಷ್ಣುತೆ ಪರೀಕ್ಷೆ : (Endurance Test)**

(ಕ್ಷೌರಿಕ, ಅಡುಗೆಯವರು, ಹಾಗೂ ಧೋಬಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಈ ಕೆಳಕಂಡ ಸಹಿಷ್ಣುತೆ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕಾಗಿರುತ್ತದೆ).

**ಸಹಿಷ್ಣುತೆ ಪರೀಕ್ಷೆ**

| | **ಅಂಶಗಳು** | **ಅರ್ಹತಾ ವೇಳೆ / ದೂರ** |
|---|---|---|
| ಎಲ್ಲಾ ಸಾಮಾನ್ಯ ಪುರುಷ ಅಭ್ಯರ್ಥಿಗಳಿಗೆ | 400 ಮೀಟರ್ ಓಟ | 1 ನಿಮಿಷ 30 ಸೆಕೆಂಡ್ ಮೀರದಂತೆ |
| | ಉದ್ದ ಜಿಗಿತ | 3.80 ಮೀಟರ್‌ಗಿಂತ ಕಡಿಮೆ ಇಲ್ಲದಂತೆ |
| | ಗುಂಡು ಎಸೆತ (4 ಕೆ.ಜಿ.) | 5.60 ಮೀಟರ್‌ಗಿಂತ ಕಡಿಮೆ ಇಲ್ಲದಂತೆ |
| ಎಲ್ಲಾ ಮಾಜಿ ಸೈನಿಕ ಅಭ್ಯರ್ಥಿಗಳಿಗೆ | 400 ಮೀಟರ್ ಓಟ | 2 ನಿಮಿಷ ಮೀರದಂತೆ |
| | ಉದ್ದ ಜಿಗಿತ | 3.80 ಮೀಟರ್‌ಗಿಂತ ಕಡಿಮೆ ಇಲ್ಲದಂತೆ |
| | ಗುಂಡು ಎಸೆತ (4 ಕೆ.ಜಿ.) | 5.60 ಮೀಟರ್‌ಗಿಂತ ಕಡಿಮೆ ಇಲ್ಲದಂತೆ |

**b) ಸಹಿಷ್ಣುತೆ ಪರೀಕ್ಷೆ : (Endurance Test)**

(ವಾಟರ್ ಕ್ಯಾರಿಯರ್ ಮತ್ತು ಕಸ ಗುಡಿಸುವವರು (ಹಸಿ ಮತ್ತು ಒಣ) ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಮಾತ್ರ ಈ ಕೆಳಕಂಡ ಸಹಿಷ್ಣುತೆ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕಾಗಿರುತ್ತದೆ).

<table>
<tr><th rowspan="2">Sl. No.</th><th colspan="2">400 mtrs Running</th><th colspan="2">Shot Put</th><th colspan="2">Long Jump</th></tr>
<tr><th>Seconds</th><th>Marks</th><th>Distance in meters</th><th>Marks</th><th>Height in meters</th><th>Marks</th></tr>
<tr><td>1</td><td>90</td><td>5</td><td>3.75</td><td>5</td><td>2.5</td><td>5</td></tr>
<tr><td>2</td><td>85</td><td>7</td><td>3.80</td><td>7</td><td>2.7</td><td>7</td></tr>
<tr><td>3</td><td>80</td><td>9</td><td>3.90</td><td>9</td><td>2.9</td><td>9</td></tr>
<tr><td>4</td><td>75</td><td>11</td><td>4.00</td><td>11</td><td>3.1</td><td>11</td></tr>
<tr><td>5</td><td>70</td><td>13</td><td>4.10</td><td>13</td><td>3.3</td><td>13</td></tr>
<tr><td>6</td><td>65</td><td>15</td><td rowspan="4">4.20 and Above</td><td rowspan="4">15</td><td rowspan="4">3.5 and Above</td><td rowspan="4">15</td></tr>
<tr><td>7</td><td>60</td><td>17</td></tr>
<tr><td>8</td><td>55</td><td>19</td></tr>
<tr><td>9</td><td>50</td><td>20</td></tr>
<tr><td colspan="7">In case if two or more candidates obtain same marks, then selection is based upon date of birth of the candidates.</td></tr>
</table>

<u>ವಿಶೇಷ ಸೂಚನೆಗಳು :–</u>

1. ಸಹಿಷ್ಣುತೆ ಪರೀಕ್ಷೆಗೆ ಹಾಜರಾಗುವ ಮುನ್ನ ಅಭ್ಯರ್ಥಿಗಳು ದೈಹಿಕವಾಗಿ ಸದೃಢರಿರಬೇಕು. ಈ ಪರೀಕ್ಷೆಗಳ ಸಂದರ್ಭದಲ್ಲಿ ಸಂಭವಿಸುವ ಯಾವುದೇ ರೀತಿಯ ಅನಾಹುತ / ತೊಂದರೆಗಳಿಗೆ ಪೊಲೀಸ್ ಇಲಾಖೆ/ ನೇಮಕಾತಿ ಸಮಿತಿಯು ಜವಾಬ್ದಾರರಾಗಿರುವುದಿಲ್ಲ. ಅಭ್ಯರ್ಥಿಗಳು ಅವರ ಸ್ವಂತ ಹಿತದೃಷ್ಠಿಯಿಂದ ಅವರ ದೇಹದ ವೈದ್ಯಕೀಯ ಪರೀಕ್ಷೆಯನ್ನು ಮಾಡಿಸಿಕೊಂಡು, ಅಭ್ಯರ್ಥಿಯ ಆರೋಗ್ಯವು ಎಲ್ಲಾ ರೀತಿಯಿಂದಲೂ ಸದೃಢವಾಗಿದೆ ಎಂದು ಖಚಿತ ಪಡಿಸಿಕೊಂಡು ಇಲಾಖೆ ನಡೆಸುವ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಎಲ್ಲಾ ವಿಧದಿಂದಲೂ ಅರ್ಹನೆಂದು ಮುಂಚಿತವಾಗಿಯೇ ತಿಳಿದುಕೊಂಡು ಹಾಜರಾಗತಕ್ಕದ್ದು. ಈ ದಿಸೆಯಲ್ಲಿ ಕನಿಷ್ಠ ಒಂದು ತಿಂಗಳ ಮುಂಚೆಯಿಂದಲೇ ಸಹಿಷ್ಣುತೆ ಪರೀಕ್ಷೆಗೆ ಅಭ್ಯರ್ಥಿಗಳು ಸಾಕಷ್ಟು ಅಭ್ಯಾಸ ಮಾಡಿಕೊಳ್ಳತಕ್ಕದ್ದು. ಸಹಿಷ್ಣುತೆ ಪರೀಕ್ಷೆಯಲ್ಲಿ ಯಾವ ಅನಾಹುತಗಳಿಗೂ ಇಲಾಖೆ ಜವಾಬ್ದಾರರಾಗುವುದಿಲ್ಲ. ಈ ಪರೀಕ್ಷೆಗಳು ಅಭ್ಯರ್ಥಿಗಳು ತನ್ನ ಸ್ವಂತ ಜವಾಬ್ದಾರಿ ಹಾಗೂ ಸ್ವಇಚ್ಛೆಯಿಂದ ಭಾಗವಹಿಸುವುದು.

2. ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು ದೈಹಿಕವಾಗಿ ಸದೃಢವಾಗಿರಬೇಕಾಗಿರುವುದರಿಂದ ಅನಾರೋಗ್ಯದ ಕಾರಣ ನಿಗದಿಪಡಿಸಲಾಗುವ ದಿನಾಂಕದಂದು ಹಾಜರಾಗದಿರುವ ಅಭ್ಯರ್ಥಿಗಳಿಗೆ ಮತ್ತೊಮ್ಮೆ ಅವಕಾಶ ಕಲ್ಪಿಸುವ ಕುರಿತು ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆ ಸಮಿತಿಯು ತೆಗೆದುಕೊಳ್ಳುವ ತೀರ್ಮಾನವೇ ಅಂತಿಮವಾಗಿರುತ್ತದೆ. ಒಂದು ವೇಳೆ ಅಭ್ಯರ್ಥಿಯು ಸಮಿತಿಯ ತೀರ್ಮಾನವನ್ನು ಉಲ್ಲಂಘಿಸಿ, ಸ್ವಇಚ್ಛೆಯಿಂದ ಭಾಗವಹಿಸಿದಲ್ಲಿ, ಉಂಟಾಗಬಹುದಾದ ಅನಾಹುತ / ತೊಂದರೆಗಳಿಗೆ ಪೊಲೀಸ್ ಇಲಾಖೆ/ ನೇಮಕಾತಿ ಸಮಿತಿಯವರು ಜವಾಬ್ದಾರರಾಗಿರುವುದಿಲ್ಲ.

## c) <u>ವೃತ್ತಿಪರ ಪರೀಕ್ಷೆ (Trade Test):-</u>

i) ವಾಟರ್ ಕ್ಯಾರಿಯರ್ ಮತ್ತು ಕಸ ಗುಡಿಸುವವರು (ಹಸಿ ಮತ್ತು ಒಣ) ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಯಾವುದೇ ವೃತ್ತಿಪರ ಪರೀಕ್ಷೆ **(Trade Test)** ಇರುವುದಿಲ್ಲ. ದೇಹದಾರ್ಢ್ಯತೆ ಪರೀಕ್ಷೆ, ಸಹಿಷ್ಣುತೆ ಪರೀಕ್ಷೆಗಳಲ್ಲಿ ಗಳಿಸಿರುವ ಅಂಕಗಳ ಹಾಗೂ ಎಸ್‌ಎಸ್‌ಎಲ್‌ಸಿ/ ತತ್ಸಮಾನ ವಿದ್ಯಾರ್ಹತೆಯಲ್ಲಿ ಗಳಿಸಿರುವ ಅಂಕಗಳನ್ನು ಕ್ರೋಢೀಕರಿಸಿ ಅದರ ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಲಾಗುತ್ತದೆ.

ii) ಇನ್ನುಳಿದ ಹುದ್ದೆಗಳಾದ (ಕ್ಷೌರಿಕ, ಅಡುಗೆಯವರು, ಧೋಬಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ ಮೇಲೆ ತಿಳಿಸಿರುವ ದೇಹದಾರ್ಢ್ಯತೆ ಪರೀಕ್ಷೆ, ಸಹಿಷ್ಣುತೆ ಪರೀಕ್ಷೆಗಳು ಅರ್ಹತಾ ಪರೀಕ್ಷೆಗಳಾಗಿದ್ದು, ಯಾವುದೇ ಅಂಕಗಳನ್ನು ನೀಡಲಾಗುವುದಿಲ್ಲ. ದೇಹದಾರ್ಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆಗಳಲ್ಲಿ ಅರ್ಹತೆ ಪಡೆದ ಅಭ್ಯರ್ಥಿಗಳಿಗೆ ಈ ಕೆಳಕಂಡಂತೆ **50** ಅಂಕಗಳ ವೃತ್ತಿಪರ ಪರೀಕ್ಷೆಯನ್ನು ನಡೆಸಲಾಗುತ್ತದೆ.

| Sl. No. | Activity particulars | | Max Marks |
|---|---|---|---|
| i. | **Trade Test** | a) Practical demonstration (ಪ್ರಾಯೋಗಿಕ ಪ್ರದರ್ಶನ) | 35 |
| | | b) Oral assessment of respective trade (ವೃತ್ತಿ ಕುರಿತಾಗಿ ಮೌಖಿಕ ಮೌಲ್ಯಮಾಪನ) | 5 |
| **ii.** | **Experience (ಅನುಭವ)** | | |
| | a) Working experience of five years and above in respective trade. (ಅರ್ಜಿ ಸಲ್ಲಿಸಲಾದ ವೃತ್ತಿಯಲ್ಲಿ 5 ವರ್ಷ ಹಾಗೂ ಮೇಲ್ಪಟ್ಟ ಅನುಭವಕ್ಕೆ) | 6 Marks | |
| | b) Working experience of two to five years in respective trade. (ಅರ್ಜಿ ಸಲ್ಲಿಸಲಾದ ವೃತ್ತಿಯಲ್ಲಿ 2 ವರ್ಷದಿಂದ 5 ವರ್ಷದ ಅನುಭವಕ್ಕೆ) | 4 Marks | 10 |
| | a) Work experience of less than two years. (ಅರ್ಜಿ ಸಲ್ಲಿಸಲಾದ ವೃತ್ತಿಯಲ್ಲಿ 2 ವರ್ಷಕ್ಕಿಂತ ಕಡಿಮೆ ಇರುವ ಅನುಭವಕ್ಕೆ) | 0 Marks | |
| **Total** | | | **50** |
| **Work experience certificate shall be obtained from the employer. The certificate shall contain a valid Trade License, GST Tin Number and PAN Number of the employer.** **ವೃತ್ತಿ ಅನುಭವ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಮಾಲೀಕರಿಂದ ಪಡೆಯಬೇಕಿರುತ್ತದೆ. ಸದರಿ ಪ್ರಮಾಣ ಪತ್ರದಲ್ಲಿ ಮಾಲೀಕರ ಅರ್ಹ ವೃತ್ತಿ ಪರವಾನಗಿ, ಜಿ.ಎಸ್.ಟಿ, ಟಿನ್ ಸಂಖ್ಯೆ ಮತ್ತು ಪಾನ್ ಸಂಖ್ಯೆಯನ್ನು ನಮೂದಿಸಲ್ಪಟ್ಟಿರಬೇಕು).** | | | |

**ಪ್ರತಿ ವೃತ್ತಿಪರ ಪರೀಕ್ಷೆಗಳಿಗೆ ಈ ಕೆಳಕಂಡ ಮಾನದಂಡಗಳು ಒಳಗೊಂಡಿರುತ್ತದೆ.**

**<u>ಕ್ಷೌರಿಕ (BARBER):</u>**

ಸಾಮಾಗ್ರಿ ಸಲಕರಣೆಗಳ ನಿರ್ವಹಣೆ, ಕೂದಲು ಕತ್ತರಿಸುವಿಕೆ [Handling of tools, Hair Cuttting,]

**<u>ಅಡಿಗೆಯವರು (COOK)</u>**

ಸಮಿತಿಯು ನಿರ್ಧರಿಸುವಂತೆ ಸಸ್ಯಹಾರಿ ಮತ್ತು ಮಾಂಸಹಾರಿ ಊಟ ಪದಾರ್ಥಗಳನ್ನು ತಯಾರಿಸುವಿಕೆ. [Vegetarian and Non-Vegetarian food item to be prepared at the discretion of committee.]

**<u>ಧೋಬಿ (DHOBI)</u>**

ಬಟ್ಟೆಯನ್ನು ಒಗೆಯುವುದು, ಖಾಕಿ ಕಾಟನ್, ಉಲ್ಲನ್ನು ಹಾಗೂ ಟೆರಿಕಾಟನ್ ಸಮವಸ್ತ್ರವನ್ನು ಇಸ್ತ್ರಿ ಮಾಡುವುದು. [Washing of clothes, Ironing of khaki Cotton Uniform, ironing of woolen, Terry cot uniforms.]

ವೃತ್ತಿವಾರು ಪರೀಕ್ಷೆಗಳ ನಂತರ ಆಯ್ಕೆ ಸಮಿತಿಯು ಅಭ್ಯರ್ಥಿಯು ವೃತ್ತಿವಾರು ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಹಾಗೂ ಎಸ್‌ಎಸ್‌ಎಲ್‌ಸಿ/ತತ್ಸಮಾನ ವಿದ್ಯಾರ್ಹತೆಯಲ್ಲಿ ಪಡೆದ ಅಂಕಗಳನ್ನು ಕ್ರೋಢೀಕರಿಸಿ ಅರ್ಹತಾ ಪಟ್ಟಿಯನ್ನು ತಯಾರಿಸಲಾಗುವುದು. ಸದರಿ ಅರ್ಹತಾ ಪಟ್ಟಿಯಿಂದ ಮೀಸಲಾತಿ ಹಾಗೂ ಖಾಲಿ ಹುದ್ದೆಗಳ ಅನುಸಾರ ವೃತ್ತಿವಾರು ತಾತ್ಕಾಲಿಕ ಆಯ್ಕೆಪಟ್ಟಿಯನ್ನು ತಯಾರಿಸಲಾಗುವುದು.

**ಟಿಪ್ಪಣಿ :**

i) ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಒಂದು ದೈಹಿಕ ಪರೀಕ್ಷೆಯ ಸಮಿತಿಯು ನಡೆಸುತ್ತದೆ. ಯಾವುದೇ ವೈದ್ಯಕೀಯ ಪ್ರಮಾಣ ಪತ್ರದ ಆಧಾರದ ಮೇಲೆ ಪರಿಗಣಿಸಲಾಗುವುದಿಲ್ಲ. ದೈಹಿಕ ಪರೀಕ್ಷೆಯ ಸಮಿತಿಯು ನೀಡುವ ಫಲಿತಾಂಶವೇ ಅಂತಿಮವಾಗಿರುತ್ತದೆ.

ii) ಸಹಿಷ್ಣತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆ ಪೂರ್ಣಗೊಂಡ ನಂತರ ಅಭ್ಯರ್ಥಿಗಳು ದೈಹಿಕ ಪರೀಕ್ಷೆ ಸಮಿತಿ ಸಮ್ಮುಖದಲ್ಲಿ ನಿಗದಿತ ನಮೂನೆಗೆ ಸಹಿ ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು. ಇಲ್ಲವಾದರೆ ಅಂತಹವರನ್ನು ಅನರ್ಹರೆಂದು ಪರಿಗಣಿಸಲಾಗುವುದು.

iii) ನಿಗದಿಪಡಿಸಿರುವ ಕನಿಷ್ಠ ಎತ್ತರ 170 ಸೆಂ.ಮೀ. ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳು ಲಭ್ಯವಿಲ್ಲದೆ ಇರುವ ಪಕ್ಷದಲ್ಲಿ ಕಡಿಮೆ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಸಹ ಅರ್ಹತೆಗೆ ಅನುಗುಣವಾಗಿ ಅಂತಿಮ ಆಯ್ಕೆಗೆ ಪರಿಗಣಿಸಲಾಗುವುದು. ಕಡಿಮೆ ಎತ್ತರ ಹೊಂದಿರುವ ಅಭ್ಯರ್ಥಿಗಳು ಹೆಚ್ಚಿನ ಅಂಕಗಳನ್ನು ಪಡೆದಿದ್ದರೂ ಮೊದಲು ಕನಿಷ್ಠ ಎತ್ತರ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳನ್ನು ಪರಿಗಣಿಸಿದ ನಂತರ ಕಡಿಮೆ ಎತ್ತರ ಹೊಂದಿರುವ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಪರಿಗಣಿಸಲಾಗುವುದು.

iv) ಪಾರದರ್ಶಕತೆಗಾಗಿ ಮೇಲೆ ಹೇಳಿದ ಎಲ್ಲಾ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ವೀಡಿಯೋಗ್ರಫಿ ಅಥವಾ ಸಿಸಿ ಟಿವಿ ಮೂಲಕ ಸೆರೆಹಿಡಿಯಲಾಗುವುದು.

* ಅಭ್ಯರ್ಥಿಗಳು ಮೇಲ್ಕಂಡ ದೇಹದಾರ್ಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆಗಳಲ್ಲಿ ಅರ್ಹರಾಗಿದ್ದರೂ ಸಹ ಪೋಲೀಸ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಯು ಶಾರೀರಿಕವಾಗಿ ಸಧೃಡರಾಗಿರಬೇಕಾಗಿರುತ್ತದೆ. ಆದ್ದರಿಂದ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸಲು ಅಡ್ಡಿಪಡಿಸುವಂತಹ ಯಾವುದೇ ದೈಹಿಕ ನ್ಯೂನ್ಯತೆಗಳನ್ನು / ಅಂಗವೈಕಲ್ಯಗಳನ್ನು ಹೊಂದಿರಬಾರದು.

## 9. ವೈದ್ಯಕೀಯ ಪರೀಕ್ಷೆ :

ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಿದ ನಂತರ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಅರ್ಹಗೊಳ್ಳುವ ಎಲ್ಲಾ ಅಭ್ಯರ್ಥಿಗಳು ವೈದ್ಯಕೀಯ ಮಂಡಳಿಯ ಮುಂದೆ ವೈದ್ಯಕೀಯ ಪರೀಕ್ಷೆಗೆ ಹಾಜರಾಗತಕ್ಕದ್ದು, ವೇಳೆ ಮತ್ತು ಸ್ಥಳವನ್ನು ನೇಮಕಾತಿ ಪ್ರಾಧಿಕಾರವು ನಿಗದಿಪಡಿಸುವುದು.

ಆಯ್ಕೆಯಾದ ಅಭ್ಯರ್ಥಿಗಳು ವೈದ್ಯಕೀಯ ಪರೀಕ್ಷೆಗೆ ಹಾಜರಾಗುವಾಗ ಮೂಲ ದಾಖಲೆಗಳೊಂದಿಗೆ (ಎಸ್‌ಎಸ್‌ಎಲ್‌ಸಿ ಅಥವಾ 10ನೇ ತರಗತಿಯ ವಿದ್ಯಾರ್ಹತೆ ಪ್ರಮಾಣ ಪತ್ರ, ಅಥವಾ ತತ್ಸಮಾನ ವಿದ್ಯಾರ್ಹತೆಯ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರ, ಸಮತಳ ಮೀಸಲಾತಿ ಕೋರಿದ್ದಲ್ಲಿ ಅವುಗಳ ಪ್ರಮಾಣ ಪತ್ರಗಳು) ಹಾಜರಾಗುವುದು ಹಾಗೂ ಪತ್ರಾಂಕಿತ (Gazetted) ಅಧಿಕಾರಿಯವರಿಂದ ದೃಢೀಕರಿಸಿದ ಮೂಲ ದಾಖಲೆಗಳ ಜೆರಾಕ್ಸ್ ಪ್ರತಿಯ ಒಂದು ಸೆಟ್‌ಅನ್ನು ಸಂಬಂಧಪಟ್ಟ ಕಛೇರಿಗೆ ನೀಡುವುದು.

## 10. ನೇಮಕಾತಿ:

ವೈದ್ಯಕೀಯ ಮಂಡಳಿಯು ವೈದ್ಯಕೀಯ ಪರೀಕ್ಷೆಯನ್ನು ನಡೆಸಿ, ನೀಡುವ ವರದಿಯನ್ನಾಧರಿಸಿ ಆಯ್ಕೆ ಪ್ರಾಧಿಕಾರವು ಹುದ್ದೆಗಳ ವೃತ್ತಿವಾರು ಅಂತಿಮ ಆಯ್ಕೆ ಪಟ್ಟಿಯನ್ನು ತಯಾರಿಸಿ ನೇಮಕಾತಿ ಪ್ರಾಧಿಕಾರಕ್ಕೆ ಕಳುಹಿಸುವುದು ಮತ್ತು ಸದರಿ ಆಯ್ಕೆ ಪಟ್ಟಿಯನ್ನು ಪ್ರಕಟಿಸುವುದು. ಅಂತಿಮ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳು ಆಯ್ಕೆಗೆ ಎಲ್ಲಾ ರೀತಿಯಿಂದಲೂ ಅರ್ಹತೆಯನ್ನು ಹೊಂದಿರುವ ಬಗ್ಗೆ ನೇಮಕಾತಿ ಪ್ರಾಧಿಕಾರವು ದೃಢಪಡಿಸಿಕೊಂಡ ನಂತರ ಖಾಲಿ ಹುದ್ದೆಗಳನುಸಾರ ನೇಮಕಾತಿ ಮಾಡಿಕೊಳ್ಳತಕ್ಕದ್ದು.

## 11. ಜಾತಿ ಮೀಸಲಾತಿ ಪ್ರಮಾಣ ಪತ್ರಗಳು :

ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಕಂಡ ನಮೂನೆಗಳಲ್ಲಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

a) ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶಿಲ್ದಾರ್ ರವರಿಂದ ಪಡೆದ ನಮೂನೆ–**"ಡಿ"** ಪ್ರಮಾಣ ಪತ್ರ.

b) ಪ್ರವರ್ಗ – 1 ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದ ನಮೂನೆ–**"ಇ"** ಪ್ರಮಾಣ ಪತ್ರ.

c) ಪ್ರವರ್ಗ– 2ಎ, 2ಬಿ, 3ಎ, 3ಬಿ ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದ ನಮೂನೆ – **"ಎಫ್"** ಪ್ರಮಾಣ ಪತ್ರ.

ಸೂಚನೆ : ನಮೂನೆ – **"ಎಫ್"** ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: 30.08.2021ಕ್ಕೆ ಐದು ವರ್ಷಕ್ಕಿಂತ ಹಳೆಯದಾಗಿರಬಾರದು.

## 12. ಗ್ರಾಮೀಣ ಮೀಸಲಾತಿ:

a) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಯು ತರಗತಿ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಹೊಂದಿರಬೇಕು, **ಮತ್ತು**

b) ಅಭ್ಯರ್ಥಿಯು ವ್ಯಾಸಂಗ ಮಾಡಿದ ಸ್ಥಳವು **ವ್ಯಾಸಂಗ ಮಾಡಿದ ಅವಧಿಯಲ್ಲಿ** ಅಂದಿನ ಕರ್ನಾಟಕ ಪೌರ ನಿಗಮಗಳ ಅಧಿನಿಯಮ 1976ರ ಅಥವಾ ಕರ್ನಾಟಕ ಪೌರಸಭೆಗಳ ಅಧಿನಿಯಮ, 1964ರ ಅಡಿಯಲ್ಲಿ ನಿರ್ದಿಷ್ಟ ಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆಯ ಹಂತದಲ್ಲಿರುವ ಪ್ರದೇಶಗಳ ಹೊರತಾಗಿ ಇತರ ಯಾವುದೇ ಪ್ರದೇಶದಲ್ಲಿರುವ ಶಾಲೆಯಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಯಾಗಿರಬೇಕು, **ಮತ್ತು**

c) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಯು ಕರ್ನಾಟಕ ಅಧಿಸೂಚನೆ ಸಂಖ್ಯೆ. ಸಿಆಸುಇ:08:ಸೆನೆನಿ:2001, ದಿನಾಂಕ 13.02.2001ರ ಪ್ರಕಾರ ಮೇಲೆ ಪರಿಭಾಷಿಸಿದಂತೆ ತರಗತಿ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಹೊಂದಿರುವವರು ಸರ್ಕಾರಿ ಆದೇಶ ಸಂಖ್ಯೆ. ಸಿಆಸುಇ/96/ಸೆನೆನಿ/2005, ದಿನಾಂಕ 10.08.2005ರಲ್ಲಿ ನಿಗದಿಪಡಿಸಿದ ನಮೂನೆ–2ರ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಶಾಲಾ ಮುಖ್ಯೋಪಾಧ್ಯಾಯರಿಂದ ಸಹಿ ಮಾಡಿಸಿ ಮತ್ತು ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿದ ಪ್ರಮಾಣ ಪತ್ರವನ್ನು ಪಡೆಯುವುದು. (ನಮೂನೆ–1 (ನಾನ್–ಕ್ರೀಮಿ ಲೇಯರ್) ಮತ್ತು ನಮೂನೆ–2 ಇವುಗಳು ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ಅಭ್ಯರ್ಥಿಗಳಿಗೆ ಕಡ್ಡಾಯವಾಗಿರುತ್ತದೆ).

d) ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, 2ಬಿ, 3ಎ, 3ಬಿ ಸೇರಿದ ಅಭ್ಯರ್ಥಿಗಳು ನಮೂನೆ–2ರಲ್ಲಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದು ಸಲ್ಲಿಸುವುದು.

**ಸೂಚನೆ:** ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ, ಪ್ರವರ್ಗ–3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹ ಅಭ್ಯರ್ಥಿಗಳು Non-Creamy Layer ಪ್ರಮಾಣ ಪತ್ರವನ್ನು ಹೊಂದಿರದಿದ್ದಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

## 13. ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರ :

ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ / ವಿಯೋಜನೆ ಹೊಂದಿದ ಬಗೆಗಿನ ಪ್ರಮಾಣ ಪತ್ರ/ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

ಕೆ.ಸಿ.ಎಸ್. (ಸಾಮಾನ್ಯ ನೇಮಕಾತಿ) ನಿಯಮ 9(1)ರನ್ವಯ ಕೇಂದ್ರ ಸಶಸ್ತ್ರದಳದಲ್ಲಿ ಸೇವೆ ಸಲ್ಲಿಸುವಾಗ ಹತರಾದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಮಾಜಿ ಸೈನಿಕ ಮಕ್ಕಳಿಗೆ ವಯೋಮಿತಿ ಸಡಿಲಿಕೆ, ಸಹಿಷ್ಣುತೆ ಪರೀಕ್ಷೆ ಹಾಗೂ ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಯಾವುದೇ ತರಹದ ವಿನಾಯಿತಿಯನ್ನು ನೀಡಲಾಗುವುದಿಲ್ಲ. ಕರ್ತವ್ಯ ನಿರ್ವಹಿಸುತ್ತಿದ್ದ ಕೇಂದ್ರ ಸಶಸ್ತ್ರದಳದ ಅಧಿಕಾರಿಗಳಿಂದ ಅವಲಂಬಿತ ಪ್ರಮಾಣ ಪತ್ರ ಮತ್ತು ಸೈನಿಕ ಬೋರ್ಡ್‌ನಿಂದ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

**14. ಕಲ್ಯಾಣ–ಕರ್ನಾಟಕ ಮೀಸಲಾತಿಯ ಸಲುವಾಗಿ ಪಡೆಯಬೇಕಾಗಿರುವ ಪ್ರಮಾಣ ಪತ್ರ:**

ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕ್ಲೇಮು ಮಾಡುವ ಅರ್ಜಿದಾರರು ಒಂದು ಸ್ವಯಂ ಘೋಷಿತ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು. ಪರಂತು ಅರ್ಜಿ ಸಲ್ಲಿಸುವ ದಿನಾಂಕದಂದು ಅರ್ಜಿದಾರರು ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆಯುವುದು ಕಡ್ಡಾಯವಾಗಿರುತ್ತದೆ. ತಾತ್ಕಾಲಿಕವಾಗಿ ಆಯ್ಕೆಗೊಂಡ ಅಭ್ಯರ್ಥಿಗಳು ದಾಖಲಾತಿ ಪರೀಕ್ಷೆಗಳ ಸಮಯದಲ್ಲಿ ಸಕ್ಷಮ ಪ್ರಾಧಿಕಾರದಿಂದ ನೀಡಲಾದ ಅರ್ಹತಾ ಪ್ರಮಾಣ ಪತ್ರ (ಅನುಬಂಧ–ಎ) ನೀಡತಕ್ಕದ್ದು. ಅರ್ಹತಾ ಪ್ರಮಾಣ ಪತ್ರದಲ್ಲಿ ಸಕ್ಷಮ ಪ್ರಾಧಿಕಾರಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ಅಂತಿಮ ದಿನಾಂಕದಂದು ಅಭ್ಯರ್ಥಿಯು ಸಾರ್ವಜನಿಕ ಉದ್ಯೋಗ ಆದೇಶದಂತೆ ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆದಿರುತ್ತಾನೆಂದು ಒಂದು ಅಡಿ ಟಿಪ್ಪಣಿಯನ್ನು ದಾಖಲಿಸುವುದು.

**ಸೂಚನೆಗಳು:–**

a) ಈ ಮೇಲೆ ನಮೂದಿಸಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ.

**b) ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದರಿಂದ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯ ಪ್ರಮಾಣ ಪತ್ರವನ್ನು ಹೊರತು ಪಡಿಸಿ ಬೇರೆ ಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಲು ಅವಕಾಶ ಇರುವುದಿಲ್ಲ, ಆದರೆ ಈ ಮೇಲಿನ ಪ್ರಮಾಣ ಪತ್ರಗಳನ್ನು / ದಾಖಲೆಗಳನ್ನು ಪಡೆದಿರಬೇಕು ಇಲ್ಲವೇ ಸಿಂಧುವಾಗಿರಬೇಕು ಹಾಗೂ ನೇಮಕಾತಿ ಸಮಿತಿಯು ಪರಿಶೀಲನೆಗಾಗಿ ಹಾಜರುಪಡಿಸಲು ಸೂಚಿಸಿದಾಗ ಅರ್ಜಿಯಲ್ಲಿ ನಮೂದಿಸಿರುವ ಮೀಸಲಾತಿಯ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದ್ದಲ್ಲಿ ಕೆಳಕಂಡ ಕ್ರಮ ಕೈಗೊಳ್ಳಲಾಗುವುದು.**

c) ವಿವಿಧ ಮೀಸಲಾತಿ ಕೋರಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳನ್ನು ಹಾಜರು ಪಡಿಸದಿದ್ದಲ್ಲಿ: ಆ ಮೀಸಲಾತಿಯನ್ನು ರದ್ದುಪಡಿಸಲಾಗುವುದು, ಹಾಗೆಯೇ ಪ್ರವರ್ಗ ಕೋರಿ ಅರ್ಜಿ ಸಲ್ಲಿಸಿ, ಜಾತಿ ಪ್ರಮಾಣ ಪತ್ರವನ್ನು ಹಾಜರು ಪಡಿಸದಿದ್ದಲ್ಲಿ ಆ ಪ್ರವರ್ಗವನ್ನು ರದ್ದುಪಡಿಸಿ ಸಾಮಾನ್ಯ ಅರ್ಹತೆಯಲ್ಲಿ ಅರ್ಹತೆಯನ್ನು ಹೊಂದಿದ್ದಲ್ಲಿ ಮಾತ್ರ ಸಾಮಾನ್ಯ ಅರ್ಹತೆಯ ಅಭ್ಯರ್ಥಿಯೆಂದು ಪರಿಗಣಿಸಲಾಗುವುದು.

**15. ಪ್ರಮುಖವಾದ ಸೂಚನೆಗಳು:**

ಅಭ್ಯರ್ಥಿಗಳು ಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಕೂಡದು. ಆದರೆ ಈ ಕೆಳಕಂಡ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿದ್ದು, ಸಮಿತಿಯು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.

a) ವಿದ್ಯಾರ್ಹತೆಯ ಅಂಕಪಟ್ಟಿ.

b) ಹುಟ್ಟಿದ ದಿನಾಂಕದ ಪ್ರಮಾಣ ಪತ್ರ (ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪ್ರಮಾಣ ಪತ್ರ)

c) ಸರ್ಕಾರಿ ಇಲಾಖೆಯಲ್ಲಿ/ರಾಜ್ಯಸರ್ಕಾರದ/ಕೇಂದ್ರ ಸರ್ಕಾರದ/ಸರ್ಕಾರದ ಯಾವುದೇ ಪ್ರಾಧಿಕಾರದಲ್ಲಿ/ರಾಜ್ಯ ಅಥವಾ ಕೇಂದ್ರ ಸರ್ಕಾರದ ಸಾರ್ವಜನಿಕ ಸ್ವಾಮ್ಯದ ಕಂಪನಿಗಳಲ್ಲಿ ಪ್ರಸ್ತುತ ಉದ್ಯೋಗಿಯಾಗಿದ್ದಲ್ಲಿ ಅಂತಹವರು ಇಲಾಖಾ ವತಿಯಿಂದ ಕರ್ತವ್ಯದಿಂದ ಬಿಡುಗಡೆ ಮಾಡುವ ಬಗ್ಗೆ ಇಚ್ಛಾ ಅನುಮತಿ ಪತ್ರ.

d) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ್‌ರಿಂದ ಪಡೆದ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು.

e) ಸೈನಿಕ ಸೇವೆಯಿಂದ ಬಿಡುಗಡೆಯಾದ / ವಿಯೋಜನೆ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ).

f) ಮಾಜಿ ಸೈನಿಕ ಮಕ್ಕಳು ಮೀಸಲಾತಿ ಪಡೆಯುವ ಅಭ್ಯರ್ಥಿಗಳು ಅವರ ತಂದೆಯವರು ಕರ್ತವ್ಯ ನಿರ್ವಹಿಸುತ್ತಿದ್ದ ಕೇಂದ್ರ ಸಶಸ್ತ್ರದಳದ ಅಧಿಕಾರಿಗಳಿಂದ ಅವಲಂಬಿತ ಪ್ರಮಾಣ ಪತ್ರ ಮತ್ತು ಸೈನಿಕ ಬೋರ್ಡ್‌ನಿಂದ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

g) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿರಬೇಕು.

h) ಅಭ್ಯರ್ಥಿಯು ಅರ್ಜಿಯಲ್ಲಿ ಭರ್ತಿ ಮಾಡಿದ ಮಾಹಿತಿಯು ಅಂತಿಮವಾಗಿರುತ್ತದೆ. ಆದ್ದರಿಂದ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವಾಗ ಅರ್ಜಿಯ ಎಲ್ಲಾ ಕಾಲಂಗಳನ್ನು ಸರಿಯಾಗಿ ಭರ್ತಿ ಮಾಡತಕ್ಕದ್ದು.

ಭರ್ತಿ ಮಾಡಿ ಸಲ್ಲಿಸಿದಂತಹ ಅರ್ಜಿಯಲ್ಲಿನ ಅಂಶ/ಮಾಹಿತಿಗಳನ್ನು ಯಾವುದೇ ಸಂದರ್ಭದಲ್ಲಿ ಬದಲಾವಣೆ ಮಾಡಲಾಗುವುದಿಲ್ಲ.

i) ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ವಿಳಾಸ ಬದಲಾವಣೆಯಾಗಿದ್ದಲ್ಲಿ ತಕ್ಷಣದಲ್ಲಿ ಅಭ್ಯರ್ಥಿಗಳು ಲಿಖಿತ ಮೂಲಕ ಸಂಬಂಧಪಟ್ಟ ಘಟಕಾಧಿಕಾರಿ ರವರ ನೇಮಕಾತಿ ಸಮಿತಿಯ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ನೇಮಕಾತಿ ಸಮಿತಿಯು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ನೇಮಕಾತಿ ಸಮಿತಿಯು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು.

j) ಅಭ್ಯರ್ಥಿಗಳು ನೇಮಕಾತಿ ಸಮಿತಿಯೊಡನೆ ಸಂಪರ್ಕಿಸಬೇಕಾದ ಸಂದರ್ಭದಲ್ಲಿ ಅವರ ಮನವಿಯೊಂದಿಗೆ ಅರ್ಜಿಯ ನಕಲು ಪ್ರತಿಯನ್ನು ಹಾಗೂ ಇತರೆ ಮಾಹಿತಿಯನ್ನು ನೀಡತಕ್ಕದ್ದು.

k) ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವಾಗ ಯಾವುದೇ ಸುಳ್ಳು/ತಪ್ಪು ಮಾಹಿತಿಗಳನ್ನು ನೀಡಬಾರದು. ಹಾಗೇ ನೀಡಿ ತದನಂತರ ನೇಮಕಾತಿ ಸಮಿತಿಗೆ ಅದು ಪತ್ತೆಯಾದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ರದ್ದು ಪಡಿಸಲಾಗುವುದು.

l) ಅರ್ಜಿದಾರರು ಯಾವುದೇ ಕ್ರಿಮಿನಲ್ ಮೊಕದ್ದಮೆಯಲ್ಲಿ ಶಿಕ್ಷೆಗೆ ಗುರಿಯಾಗಿರಬಾರದು. ಕ್ರಿಮಿನಲ್ ಮೊಕದ್ದಮೆಯಲ್ಲಿ ಭಾಗಿಯಾಗಿ ಬಿಡುಗಡೆ / ಖುಲಾಸೆಯಾಗಿದ್ದಲ್ಲಿ ನೇಮಕಾತಿ ಪ್ರಾಧಿಕಾರವು ತೆಗೆದುಕೊಳ್ಳುವ ತೀರ್ಮಾನವೇ ಅಂತಿಮವಾಗಿರುತ್ತದೆ.

**16. <u>ವಿಶೇಷ ಸೂಚನೆಗಳು</u>** : ಅಭ್ಯರ್ಥಿಗಳು ನೇಮಕಾತಿ ಸಮಿತಿಯು ನಿಗದಿಪಡಿಸಿದ ಅರ್ಜಿ ನಮೂನೆಯಲ್ಲಿಯೇ ಎಲ್ಲಾ ಅಂಕಣಗಳನ್ನು ಸ್ಪಷ್ಟವಾಗಿ ಭರ್ತಿ ಮಾಡತಕ್ಕದ್ದು. ಇತರೆ ಯಾವುದೇ ನಮೂನೆಗಳಲ್ಲಿ ಸಲ್ಲಿಸುವ, ಶುಲ್ಕ ಪಾವತಿಸದೆ ಸಲ್ಲಿಸಲ್ಪಡುವ, ಅಪೂರ್ಣವಾಗಿರುವ, ಸಹಿ ಮಾಡದ ಹಾಗೂ ಭಾವಚಿತ್ರ ಇಲ್ಲದೆ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಹಾಗೂ ಈ ಕೆಳಕಂಡ ವಿಶೇಷ ಸೂಚನೆಗಳನ್ನು ಗಮನಿಸುವುದು.

a) ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಸಲ್ಲಿಸಿದ ಅರ್ಜಿಯ ಪ್ರತಿಯನ್ನು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳಲು ಸೂಚಿಸಿದೆ.

b) ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಅರ್ಜಿಯಲ್ಲಿನ ನಿಗದಿತ ಕಾಲಂನ್ನು ತುಂಬತಕ್ಕದ್ದು ಹಾಗೂ ಅವರ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣ ಪ್ರಮಾಣ ಪತ್ರವನ್ನು **(No Objection Certificate)** ಸಂಬಂಧಿತ ಇಲಾಖಾ ಮುಖ್ಯಸ್ಥರಿಂದ ಪಡೆದಿಟ್ಟುಕೊಂಡಿದ್ದು ನೇಮಕಾತಿ ಸಮಿತಿಯು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.

c) ಅಭ್ಯರ್ಥಿಗಳು ಒಂದು ವೃತ್ತಿಗೆ ಮಾತ್ರ ಅರ್ಜಿಯನ್ನು ಸಲ್ಲಿಸಬೇಕು. ಅಭ್ಯರ್ಥಿಗಳು ಒಂದು ವೃತ್ತಿಯ ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಬಾರದೆಂದು ಸಲಹೆ ನೀಡಲಾಗಿದೆ. ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸುವ ಬದಲು ಒಂದೇ ಅರ್ಜಿಯನ್ನು ಅತೀ ಜಾಗರೂಕತೆಯಿಂದ ಮತ್ತು ಬಹಳ ಎಚ್ಚರಿಕೆಯಿಂದ ಭರ್ತಿ ಮಾಡತಕ್ಕದ್ದು, ಏಕೆಂದರೆ ಒಂದಕ್ಕಿಂತ ಹೆಚ್ಚು ನೋಂದಣಿ ಸಂಖ್ಯೆಯಲ್ಲಿ ಪರೀಕ್ಷೆಗೆ ಹಾಜರಾಗಿದ್ದು ಯಾವುದೇ ಹಂತದಲ್ಲಿ ಕಂಡುಬಂದಲ್ಲಿ ಅಂತಹ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು. ಸಂಕ್ಷಿಪ್ತವಾಗಿ ತಿಳಿಸುವುದೇನೆಂದರೆ ಒಬ್ಬ ಅಭ್ಯರ್ಥಿಯು ಒಂದು ನೋಂದಣಿ ಸಂಖ್ಯೆಗಿಂತ ಹೆಚ್ಚು ನೋಂದಣಿ ಸಂಖ್ಯೆಯನ್ನು ಪರೀಕ್ಷೆಯ ಯಾವುದೇ ಹಂತದಲ್ಲಿ ಬಳಸುವುದನ್ನು ನಿಖರವಾಗಿ ನಿಷೇಧಿಸಲಾಗಿದೆ. ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಒಂದೇ ಹೆಸರಿನಲ್ಲಿ ಸಲ್ಲಿಸಿ ಬೇರೆ ಬೇರೆ ಫೋಟೋಗಳನ್ನು ಅಂಟಿಸಿ, ಸಹಿಗಳನ್ನು ಮಾಡಿ ಪರೀಕ್ಷೆಗೆ ಹಾಜರಾಗಿದ್ದು ಕಂಡುಬಂದಲ್ಲಿ ಅಂತಹವರ ಎಲ್ಲಾ ಅರ್ಜಿಗಳನ್ನು ತಿರಸ್ಕರಿಸುವುದಲ್ಲದೇ ಅವರ ಮೇಲೆ ಕಾನೂನಿನ ರೀತ್ಯಾ ಕ್ರಮವನ್ನು ಕೈಗೊಳ್ಳಲಾಗುವುದು. ಈ ವಿಚಾರದಲ್ಲಿ ನೇಮಕಾತಿ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.

d) ಅರ್ಹ ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನಾ ಸಂದರ್ಭದಲ್ಲಿ ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಮಾಹಿತಿಗಳಿಗೆ ಪೂರಕವಾಗಿ ಸದರಿ ದಾಖಲೆ / ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸಬೇಕು, ತಪ್ಪಿದ್ದಲ್ಲಿ ಅಂತಹ ಮೀಸಲಾತಿಯನ್ನು ರದ್ದುಪಡಿಸಿ, ಸಾಮಾನ್ಯ ವರ್ಗದಡಿಯಲ್ಲಿ ಅರ್ಹತೆ ಹೊಂದಿದಲ್ಲಿ ಪರಿಗಣಿಸಲಾಗುವುದು. ಅರ್ಜಿಯೊಂದಿಗೆ ಯಾವುದೇ ಮೂಲ ಪ್ರಮಾಣ ಪತ್ರಗಳನ್ನು ಹಾಗೂ ಪ್ರತಿಗಳನ್ನು ಸಲ್ಲಿಸುವ ಅಗತ್ಯವಿರುವುದಿಲ್ಲ. ಒಂದು ವೇಳೆ ಸಲ್ಲಿಸಿ, ಅವು ಕಳೆದು ಹೋದರೆ ನೇಮಕಾತಿ ಸಮಿತಿಯು ಜವಾಬ್ದಾರಿಯಾಗುವುದಿಲ್ಲ.

e) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಅಂದರೆ ದಿನಾಂಕ: 30.08.2021ಕ್ಕೆ ಮೊದಲು ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆ(ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ)ಯನ್ನು ಹೊಂದಿರಬೇಕು.

f) ಅಭ್ಯರ್ಥಿಗಳು ಅರ್ಜಿಯಲ್ಲಿ ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿದ್ದಲ್ಲಿ ಅದಕ್ಕೆ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ. ಅರ್ಜಿಯಲ್ಲಿನ ವಿವರಗಳು ಸರಿಯಾಗಿವೆಯೇ ಎಂದು ಮನಗಂಡು ಆ ನಂತರ ಮೂಲ ಅರ್ಜಿಯನ್ನು ಭರ್ತಿ ಮಾಡುವುದು ಸೂಕ್ತ.

g) ಒಂದು ವೇಳೆ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ/ಬಂದ್ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನದಂದು ಅರ್ಜಿಗಳನ್ನು ಸ್ವೀಕರಿಸಲಾಗುವುದು. ಆದರೆ ವಯೋಮಿತಿ ಹಾಗೂ ಕನಿಷ್ಠ ಶೈಕ್ಷಣಿಕ ವಿದ್ಯಾರ್ಹತೆಯ ಪರಿಗಣನೆಗೆ ದಿನಾಂಕ: 30.08.2021 ಮಾತ್ರ ಅನ್ವಯವಾಗುತ್ತದೆ.

h) ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಸದರಿ ಅರ್ಜಿ ತಿರಸ್ಕೃತವಾದಲ್ಲಿ ತತ್ಸಂಬಂಧ ಯಾವುದೇ ರೀತಿಯ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

i) ಅರ್ಜಿ ತುಂಬುವ ವಿಧಾನ ಹಾಗೂ ಹೆಚ್ಚಿನ ವಿವರಗಳು ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್ https://recruitment.ksp.gov.in ನಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ.

j) ಅಭ್ಯರ್ಥಿಗಳು ತಮ್ಮ ಅರ್ಜಿಗಳಲ್ಲಿ ನೀಡುವ ಮಾಹಿತಿಗಳು ಸರಿ ಇದೆ ಎಂದು ಭಾವಿಸಿ, ಅವರುಗಳು ದೇಹದಾರ್ಢ್ಯತೆ, ಸಹಿಷ್ಣುತೆ ಮತ್ತು ವೃತ್ತಿವಾರು ಪರೀಕ್ಷೆಗಳಿಗೆ ಅರ್ಹರೆ ಎಂಬುದನ್ನು ಪರಿಗಣಿಸಿ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಪ್ರವೇಶ ಪತ್ರಗಳನ್ನು ತಯಾರು (Upload) ಮಾಡಲಾಗುತ್ತದೆ. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ಪೂರ್ಣ ಮಾಹಿತಿ ನೀಡದ ಅಥವಾ ತಪ್ಪು ಮಾಹಿತಿ ನೀಡಿದ, ಶುಲ್ಕ ಪಾವತಿಸದ, ಅಭ್ಯರ್ಥಿಯ ಸಹಿ ಇಲ್ಲದ ಮತ್ತು ಭಾವಚಿತ್ರ ಇಲ್ಲದೆ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

k) ಪರೀಕ್ಷೆಗೆ ಪ್ರವೇಶವು ಸಂಪೂರ್ಣವಾಗಿ ತಾತ್ಕಾಲಿಕವಾಗಿರುತ್ತದೆ. ಪ್ರವೇಶ ಪತ್ರ ನೀಡಿದ ಮಾತ್ರಕ್ಕೆ ನೇಮಕಾತಿ ಸಮಿತಿಯು ನಿಮ್ಮ ಅಭ್ಯರ್ಥಿತನವನ್ನು ಅಂಗೀಕರಿಸಿದೆ ಎಂದು ಭಾವಿಸತಕ್ಕದ್ದಲ್ಲ.

l) ಕರ್ನಾಟಕ ರಾಜ್ಯದ, ಕೇಂದ್ರ ಸರ್ಕಾರದ ಯಾವುದೇ ಸರ್ಕಾರಿ ಹಾಗೂ ಅರೆ ಸರ್ಕಾರಿ ಸಂಸ್ಥೆಯ ಸೇವೆಯಿಂದ ವಜಾ ಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ.

m) ಸುಳ್ಳು ಮಾಹಿತಿ ಅಥವಾ ನಕಲಿ ಪ್ರಮಾಣ ಪತ್ರ/ದಾಖಲೆಗಳನ್ನು ಸಲ್ಲಿಸಿ ನೌಕರಿ ಪಡೆಯುವುದು/ ಪಡೆದಿರುವುದು ಯಾವುದೇ ಸಂದರ್ಭದಲ್ಲಿ ಕಂಡು ಬಂದಲ್ಲಿ, ಅದೇ ಹಂತದಲ್ಲಿ ಅವರನ್ನು ಯಾವುದೇ ಮುನ್ಸೂಚನೆ ನೀಡದೆ ಅವರ ಅಭ್ಯರ್ಥಿತನವನ್ನು ರದ್ದುಗೊಳಿಸುವುದರ ಜೊತೆಗೆ ಅವರ ವಿರುದ್ಧ ಕಾನೂನು ರೀತಿಯ ಕ್ರಮ ತೆಗೆದುಕೊಳ್ಳಲಾಗುವುದು.

n) ಅಭ್ಯರ್ಥಿಯು ಹುದ್ದೆಗೆ ಅರ್ಜಿ ಸಲ್ಲಿಸಿದ ತಕ್ಷಣ ತಾನು ನಿಯಮ ಮತ್ತು ವಿನಿಯಮಗಳಿಗೆ (Rules & Regulations) ಬದ್ಧನಾಗಿರುತ್ತಾನೆ ಎಂದು ಭಾವಿಸಲಾಗಿರುತ್ತದೆ. ಒಂದು ವೇಳೆ ತಾನು ಸದರಿ ಹುದ್ದೆಗೆ ಆಯ್ಕೆಯಾಗದ ಪಕ್ಷದಲ್ಲಿ ತದನಂತರ ಅದೇ ನಿಯಮಗಳನ್ನು ಪ್ರಶ್ನಿಸಲು ಬರುವುದಿಲ್ಲ.

o) ಕೆ.ಸಿ.ಎಸ್. (ಸಾಮಾನ್ಯ ನೇಮಕಾತಿ) ನಿಯಮಗಳು 1977 ಹಾಗೂ ಸದರಿ ನಿಯಮಕ್ಕೆ ಆಗಿರುವ ತಿದ್ದುಪಡಿ ಹಾಗೂ ವೃಂದ ಮತ್ತು ನೇಮಕಾತಿ ನಿಯಮಗಳು 2020ರಲ್ಲಿ ನಿರ್ದಿಷ್ಟಗೊಳಿಸಿರುವಂತೆ ಆಯ್ಕೆಯಾದ ಅಭ್ಯರ್ಥಿಯು ನೇಮಕಾತಿ ಆದೇಶ ನೀಡುವ ಮುನ್ನ ಪೂರ್ಣ ಪ್ರಮಾಣದ ವೈದ್ಯಕೀಯ ಪರೀಕ್ಷೆಗೆ ಒಳಗಾಗಬೇಕಾಗುತ್ತದೆ.

p) **ದುರ್ನಡತೆ** : ಒಬ್ಬ ಅಭ್ಯರ್ಥಿಯು ತನ್ನ ಬದಲಿಗೆ ಬೇರೊಬ್ಬ ನಕಲಿ ವ್ಯಕ್ತಿಯನ್ನು ದೈಹಿಕ/ವೃತ್ತಿಪರ/ವೈದ್ಯಕೀಯ/ ಪರೀಕ್ಷೆಗಳಿಗೆ ಕಳುಹಿಸಿದ್ದಲ್ಲಿ ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ವರ್ತಿಸುತ್ತಿರುವನೆಂದು, ತಪ್ಪಿತಸ್ಥನೆಂದು ಕಂಡುಬಂದಲ್ಲಿ ಅಥವಾ ಒಂದು ಕೇಂದ್ರದಲ್ಲಿ ದೈಹಿಕ ಪರೀಕ್ಷೆಗಳಿಗೆ ಹಾಜರಾಗಿರುವ ವಿಷಯವನ್ನು ಮರೆಮಾಚಿ

ಮತ್ತೊಂದು ಕೇಂದ್ರದಲ್ಲಿ ದೈಹಿಕ ಪರೀಕ್ಷೆಗೆ ಹಾಜರಾದರೆ ಹಾಗೂ ನೇಮಕಾತಿ ಸಮಿತಿಯಿಂದ ನೀಡಲಾದ ಯಾವುದೇ ಸೂಚನೆಗಳನ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ನೇಮಕಾತಿ ಸಮಿತಿ ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.

**18. ಸಹಾಯವಾಣಿ :**

ಅಭ್ಯರ್ಥಿಗಳು ಅನುಯಾಯಿ ಹುದ್ದೆಗಳ ನೇಮಕಾತಿ ಸಹಾಯವಾಣಿ ಸಂಖ್ಯೆ. 080–22943346ನ್ನು ಸಂಪರ್ಕಿಸಿ ನೇಮಕಾತಿಗೆ ಸಂಬಂಧಿಸಿದ ಪ್ರಶ್ನೆಗಳನ್ನು ಸ್ಪಷ್ಟ ಪಡಿಸಿಕೊಳ್ಳಬಹುದು. ಈ ಸಹಾಯವಾಣಿ ದಿನಾಂಕ:30.07.2021 ರಿಂದ ಪ್ರತಿದಿನ ಬೆಳಿಗ್ಗೆ 10–00 ರಿಂದ ಸಾಯಂಕಾಲ 6–00 ಗಂಟೆಯವರೆಗೆ ಲಭ್ಯವಿರುತ್ತದೆ.

ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್,
ನೇಮಕಾತಿ, ಕಾರ್ಲಟನ್ ಭವನ,
ಅರಮನೆ ರಸ್ತೆ, ಬೆಂಗಳೂರು – 560001.

## ಅನುಬಂಧ–ಅ

## 1ನೇ ಪಡೆ, ಕೆ.ಎಸ್.ಆರ್.ಪಿ, ಬೆಂಗಳೂರು, 25 ಹುದ್ದೆಗಳು (ಪುರುಷ)

| ಕ್ರ ಸಂ | ವೃತ್ತಿ | ಒಟ್ಟು ಹುದ್ದೆಗಳು | ಮೀಸಲಾತಿ | ಹುದ್ದೆಗಳ ಸಂಖ್ಯೆ |
|---|---|---|---|---|
| 1 | ಅಡುಗೆಯವರು | 9 | ಸಾ.ಅ (ಇತರೆ) | 3 |
| | | | ಸಾ.ಅ (ಗ್ರಾಮೀಣ) | 1 |
| | | | ಪ.ಜಾ (ಇತರೆ) | 2 |
| | | | ಪ.ಪಂ (ಇತರೆ) | 1 |
| | | | ಪ್ರವರ್ಗ–1 (ಇತರೆ) | 1 |
| | | | ಪ್ರವರ್ಗ–2ಎ (ಇತರೆ) | 1 |
| 2 | ಕ್ಷೌರಿಕ | 6 | ಸಾ.ಅ (ಇತರೆ) | 2 |
| | | | ಸಾ.ಅ (ಗ್ರಾಮೀಣ) | 1 |
| | | | ಪ.ಜಾ (ಇತರೆ) | 1 |
| | | | ಪ.ಪಂ (ಇತರೆ) | 1 |
| | | | ಪ್ರವರ್ಗ–1 (ಇತರೆ) | 1 |
| 3 | ಧೋಭಿ | 5 | ಸಾ.ಅ (ಇತರೆ) | 2 |
| | | | ಪ.ಜಾ (ಇತರೆ) | 1 |
| | | | ಪ.ಪಂ (ಇತರೆ) | 1 |
| | | | ಪ್ರವರ್ಗ–1 (ಇತರೆ) | 1 |
| 4 | ಕಸ ಗುಡಿಸುವವರು (ಒಣ/ಹಸಿ) | 5 | ಸಾ.ಅ (ಇತರೆ) | 2 |
| | | | ಪ.ಜಾ (ಇತರೆ) | 1 |
| | | | ಪ.ಪಂ (ಇತರೆ) | 1 |
| | | | ಪ್ರವರ್ಗ–1 (ಇತರೆ) | 1 |
| | **ಒಟ್ಟು** | **25** | | **25** |

ಸಹಿ/–
ಕಮಾಂಡೆಂಟ್, 1ನೇ ಪಡೆ,
ಕೆ.ಎಸ್.ಆರ್.ಪಿ, ಬೆಂಗಳೂರು

## ಅನುಬಂಧ–ಅ
## 5ನೇ ಪಡೆ, ಕೆ.ಎಸ್.ಆರ್.ಪಿ, ಮೈಸೂರು, 30 ಹುದ್ದೆಗಳು (ಪುರುಷ)

| ಕ್ರ ಸಂ | ವೃತ್ತಿ | ಒಟ್ಟು ಹುದ್ದೆಗಳು | ಮೀಸಲಾತಿ | ಹುದ್ದೆಗಳ ಸಂಖ್ಯೆ |
|---|---|---|---|---|
| 1 | ಅಡುಗೆಯವರು | 8 | ಸಾ.ಅ (ಇತರೆ) | 3 |
| | | | ಸಾ.ಅ (ಗ್ರಾಮೀಣ) | 1 |
| | | | ಪ.ಜಾ (ಇತರೆ) | 1 |
| | | | ಪ.ಪಂ (ಇತರೆ) | 1 |
| | | | ಪ್ರವರ್ಗ–1 (ಇತರೆ) | 1 |
| | | | ಪ್ರವರ್ಗ–2ಎ (ಇತರೆ) | 1 |
| 2 | ಕ್ಷೌರಿಕ | 8 | ಸಾ.ಅ (ಇತರೆ) | 3 |
| | | | ಸಾ.ಅ (ಗ್ರಾಮೀಣ) | 1 |
| | | | ಪ.ಜಾ (ಇತರೆ) | 1 |
| | | | ಪ.ಪಂ (ಇತರೆ) | 1 |
| | | | ಪ್ರವರ್ಗ–1 (ಇತರೆ) | 1 |
| | | | ಪ್ರವರ್ಗ–2ಎ (ಇತರೆ) | 1 |
| 3 | ಧೋಬಿ | 7 | ಸಾ.ಅ (ಇತರೆ) | 2 |
| | | | ಸಾ.ಅ (ಗ್ರಾಮೀಣ) | 1 |
| | | | ಪ.ಜಾ (ಇತರೆ) | 1 |
| | | | ಪ.ಪಂ (ಇತರೆ) | 1 |
| | | | ಪ್ರವರ್ಗ–1 (ಇತರೆ) | 1 |
| | | | ಪ್ರವರ್ಗ–2ಎ (ಇತರೆ) | 1 |
| 4 | ಕಸ ಗುಡಿಸುವವರು (ಒಣ/ಹಸಿ) | 7 | ಸಾ.ಅ (ಇತರೆ) | 2 |
| | | | ಸಾ.ಅ (ಗ್ರಾಮೀಣ) | 1 |
| | | | ಪ.ಜಾ (ಇತರೆ) | 1 |
| | | | ಪ.ಪಂ (ಇತರೆ) | 1 |
| | | | ಪ್ರವರ್ಗ–1 (ಇತರೆ) | 1 |
| | | | ಪ್ರವರ್ಗ–2ಎ (ಇತರೆ) | 1 |
| | **ಒಟ್ಟು** | **30** | | **30** |

ಸಹಿ/–
ಕಮಾಂಡೆಂಟ್, 5ನೇ ಪಡೆ,
ಕೆ.ಎಸ್.ಆರ್.ಪಿ, ಮೈಸೂರು.

**ಅನುಬಂಧ–ಅ**

**6ನೇ ಪಡೆ, ಕೆ.ಎಸ್.ಆರ್.ಪಿ, ಕಲಬುರಗಿ, 25 ಹುದ್ದೆಗಳು (ಕಲ್ಯಾಣ ಕರ್ನಾಟಕ) (ಪುರುಷ)**

| ಕ್ರ ಸಂ | ವೃತ್ತಿ | ಒಟ್ಟು ಹುದ್ದೆಗಳು | ಮೀಸಲಾತಿ | ಹುದ್ದೆಗಳ ಸಂಖ್ಯೆ |
|---|---|---|---|---|
| 1 | ಅಡುಗೆಯವರು | 9 | ಸಾ.ಅ (ಇತರೆ) | 3 |
| | | | ಸಾ.ಅ (ಗ್ರಾಮೀಣ) | 1 |
| | | | ಪ.ಜಾ (ಇತರೆ) | 2 |
| | | | ಪ.ಪಂ (ಇತರೆ) | 1 |
| | | | ಪ್ರವರ್ಗ–1 (ಇತರೆ) | 1 |
| | | | ಪ್ರವರ್ಗ–2ಎ (ಇತರೆ) | 1 |
| 2 | ಕ್ಷೌರಿಕ | 4 | ಸಾ.ಅ (ಇತರೆ) | 2 |
| | | | ಪ.ಜಾ (ಇತರೆ) | 1 |
| | | | ಪ.ಪಂ (ಇತರೆ) | 1 |
| 3 | ಧೋಬಿ | 4 | ಸಾ.ಅ (ಇತರೆ) | 2 |
| | | | ಪ.ಜಾ (ಇತರೆ) | 1 |
| | | | ಪ.ಪಂ (ಇತರೆ) | 1 |
| 4 | ಕಸ ಗುಡಿಸುವವರು (ಒಣ/ಹಸಿ) | 8 | ಸಾ.ಅ (ಇತರೆ | 3 |
| | | | ಸಾ.ಅ (ಗ್ರಾಮೀಣ) | 1 |
| | | | ಪ.ಜಾ (ಇತರೆ) | 1 |
| | | | ಪ.ಪಂ (ಇತರೆ) | 1 |
| | | | ಪ್ರವರ್ಗ–1 (ಇತರೆ) | 1 |
| | | | ಪ್ರವರ್ಗ–2ಎ (ಇತರೆ) | 1 |
| | **ಒಟ್ಟು** | **25** | | **25** |

ಸಹಿ/–
ಕಮಾಂಡೆಂಟ್, 6ನೇ ಪಡೆ,
ಕೆ.ಎಸ್.ಆರ್.ಪಿ, ಕಲಬುರಗಿ.

**ಅನುಬಂಧ–ಅ**

**7ನೇ ಪಡೆ, ಕೆ.ಎಸ್.ಆರ್.ಪಿ, ಮಂಗಳೂರು, 46 ಹುದ್ದೆಗಳು (ಪುರುಷ)**

| ಕ್ರ ಸಂ | ವೃತ್ತಿ | ಒಟ್ಟು ಹುದ್ದೆಗಳು | ಮೀಸಲಾತಿ | ಹುದ್ದೆಗಳ ಸಂಖ್ಯೆ |
|---|---|---|---|---|
| 1 | ಅಡುಗೆಯವರು | 13 | ಸಾ.ಅ (ಇತರೆ) | 4 |
| | | | ಸಾ.ಅ (ಗ್ರಾಮೀಣ) | 2 |
| | | | ಪ.ಜಾ (ಇತರೆ) | 2 |
| | | | ಪ.ಪಂ (ಇತರೆ) | 1 |
| | | | ಪ್ರವರ್ಗ–1 (ಇತರೆ) | 1 |
| | | | ಪ್ರವರ್ಗ–2ಎ (ಇತರೆ) | 2 |
| | | | ಪ್ರವರ್ಗ–2ಬಿ (ಇತರೆ) | 1 |
| 2 | ಕ್ಷೌರಿಕ | 9 | ಸಾ.ಅ (ಇತರೆ) | 3 |
| | | | ಸಾ.ಅ (ಗ್ರಾಮೀಣ) | 1 |
| | | | ಪ.ಜಾ (ಇತರೆ) | 2 |
| | | | ಪ.ಪಂ (ಇತರೆ) | 1 |
| | | | ಪ್ರವರ್ಗ–1 (ಇತರೆ) | 1 |
| | | | ಪ್ರವರ್ಗ–2ಎ (ಇತರೆ) | 1 |
| 3 | ಧೋಬಿ | 11 | ಸಾ.ಅ (ಇತರೆ) | 4 |
| | | | ಸಾ.ಅ (ಗ್ರಾಮೀಣ) | 1 |
| | | | ಪ.ಜಾ (ಇತರೆ) | 2 |
| | | | ಪ.ಪಂ (ಇತರೆ) | 1 |
| | | | ಪ್ರವರ್ಗ–1 (ಇತರೆ) | 1 |
| | | | ಪ್ರವರ್ಗ–2ಎ (ಇತರೆ) | 1 |
| | | | ಪ್ರವರ್ಗ–2ಬಿ (ಇತರೆ) | 1 |
| 4 | ಕಸ ಗುಡಿಸುವವರು (ಒಣ/ಹಸಿ) | 13 | ಸಾ.ಅ (ಇತರೆ) | 4 |
| | | | ಸಾ.ಅ (ಗ್ರಾಮೀಣ) | 2 |
| | | | ಪ.ಜಾ (ಇತರೆ) | 2 |
| | | | ಪ.ಪಂ (ಇತರೆ) | 1 |
| | | | ಪ್ರವರ್ಗ–1 (ಇತರೆ) | 1 |
| | | | ಪ್ರವರ್ಗ–2ಎ (ಇತರೆ) | 2 |
| | | | ಪ್ರವರ್ಗ–2ಬಿ (ಇತರೆ) | 1 |
| | **ಒಟ್ಟು** | **46** | | **46** |

ಸಹಿ/–
ಕಮಾಂಡೆಂಟ್, 7ನೇ ಪಡೆ,
ಕೆ.ಎಸ್.ಆರ್.ಪಿ, ಮಂಗಳೂರು.

**ಅನುಬಂಧ–ಅ**

**10ನೇ ಪಡೆ, ಕೆ.ಎಸ್.ಆರ್.ಪಿ, ಶಿಗ್ಗಾವಿ, 50 ಹುದ್ದೆಗಳು (ಪುರುಷ)**

| ಕ್ರ ಸಂ | ವೃತ್ತಿ | ಒಟ್ಟು ಹುದ್ದೆಗಳು | ಮೀಸಲಾತಿ | ಹುದ್ದೆಗಳ ಸಂಖ್ಯೆ |
|---|---|---|---|---|
| 1 | ಅಡುಗೆಯವರು | 15 | ಸಾ.ಅ (ಇತರೆ) | 5 |
| | | | ಸಾ.ಅ (ಗ್ರಾಮೀಣ) | 2 |
| | | | ಪ.ಜಾ (ಇತರೆ) | 2 |
| | | | ಪ.ಜಾ (ಗ್ರಾಮೀಣ) | 1 |
| | | | ಪ.ಪಂ (ಇತರೆ) | 1 |
| | | | ಪ್ರವರ್ಗ–1 (ಇತರೆ) | 1 |
| | | | ಪ್ರವರ್ಗ–2ಎ (ಇತರೆ) | 2 |
| | | | ಪ್ರವರ್ಗ–2ಬಿ (ಇತರೆ) | 1 |
| 2 | ಕ್ಷೌರಿಕ | 12 | ಸಾ.ಅ (ಇತರೆ) | 4 |
| | | | ಸಾ.ಅ (ಗ್ರಾಮೀಣ) | 2 |
| | | | ಪ.ಜಾ (ಇತರೆ) | 2 |
| | | | ಪ.ಪಂ (ಇತರೆ) | 1 |
| | | | ಪ್ರವರ್ಗ–1 (ಇತರೆ) | 1 |
| | | | ಪ್ರವರ್ಗ–2ಎ (ಇತರೆ) | 1 |
| | | | ಪ್ರವರ್ಗ–2ಬಿ (ಇತರೆ) | 1 |
| 3 | ಧೋಬಿ | 12 | ಸಾ.ಅ (ಇತರೆ) | 4 |
| | | | ಸಾ.ಅ (ಗ್ರಾಮೀಣ) | 2 |
| | | | ಪ.ಜಾ (ಇತರೆ) | 2 |
| | | | ಪ.ಪಂ (ಇತರೆ) | 1 |
| | | | ಪ್ರವರ್ಗ–1 (ಇತರೆ) | 1 |
| | | | ಪ್ರವರ್ಗ–2ಎ (ಇತರೆ) | 1 |
| | | | ಪ್ರವರ್ಗ–2ಬಿ (ಇತರೆ) | 1 |
| 4 | ಕಸ ಗುಡಿಸುವವರು (ಒಣ/ಹಸಿ) | 11 | ಸಾ.ಅ (ಇತರೆ) | 4 |
| | | | ಸಾ.ಅ (ಗ್ರಾಮೀಣ) | 1 |
| | | | ಪ.ಜಾ (ಇತರೆ) | 2 |
| | | | ಪ.ಪಂ (ಇತರೆ) | 1 |
| | | | ಪ್ರವರ್ಗ–1 (ಇತರೆ) | 1 |
| | | | ಪ್ರವರ್ಗ–2ಎ (ಇತರೆ) | 1 |
| | | | ಪ್ರವರ್ಗ–2ಬಿ (ಇತರೆ) | 1 |
| | **ಒಟ್ಟು** | **50** | | **50** |

ಸಹಿ/–
ಕಮಾಂಡೆಂಟ್, 10ನೇ ಪಡೆ,
ಕೆ.ಎಸ್.ಆರ್.ಪಿ, ಶಿಗ್ಗಾವಿ.

## ಅನುಬಂಧ–ಅ

## 12ನೇ ಪಡೆ, ಕೆ.ಎಸ್.ಆರ್.ಪಿ, ತುಮಕೂರು, 74 ಹುದ್ದೆಗಳು (ಪುರುಷ)

| ಕ್ರ ಸಂ | ವೃತ್ತಿ | ಒಟ್ಟು ಹುದ್ದೆಗಳು | ಮೀಸಲಾತಿ | ಹುದ್ದೆಗಳ ಸಂಖ್ಯೆ |
|---|---|---|---|---|
| 1 | ಅಡುಗೆಯವರು | 27 | ಸಾ.ಅ (ಇತರೆ) | 8 |
| | | | ಸಾ.ಅ (ಗ್ರಾಮೀಣ) | 4 |
| | | | ಸಾ.ಅ (ಮಾ.ಸೈನಿಕ) | 1 |
| | | | ಪ.ಜಾ (ಇತರೆ) | 4 |
| | | | ಪ.ಜಾ (ಗ್ರಾಮೀಣ) | 1 |
| | | | ಪ.ಪಂ (ಇತರೆ) | 1 |
| | | | ಪ್ರವರ್ಗ–1 (ಇತರೆ) | 1 |
| | | | ಪ್ರವರ್ಗ–2ಎ (ಇತರೆ) | 3 |
| | | | ಪ್ರವರ್ಗ–2ಎ (ಗ್ರಾಮೀಣ) | 1 |
| | | | ಪ್ರವರ್ಗ–2ಬಿ (ಇತರೆ) | 1 |
| | | | ಪ್ರವರ್ಗ–3ಎ (ಇತರೆ) | 1 |
| | | | ಪ್ರವರ್ಗ–3ಬಿ (ಇತರೆ) | 1 |
| 2 | ಕ್ಷೌರಿಕ | 6 | ಸಾ.ಅ (ಇತರೆ) | 2 |
| | | | ಸಾ.ಅ (ಗ್ರಾಮೀಣ) | 1 |
| | | | ಪ.ಜಾ (ಇತರೆ) | 1 |
| | | | ಪ.ಪಂ (ಇತರೆ) | 1 |
| | | | ಪ್ರವರ್ಗ–1 (ಇತರೆ) | 1 |
| 3 | ಧೋಭಿ | 14 | ಸಾ.ಅ (ಇತರೆ) | 5 |
| | | | ಸಾ.ಅ (ಗ್ರಾಮೀಣ) | 2 |
| | | | ಪ.ಜಾ (ಇತರೆ) | 2 |
| | | | ಪ.ಪಂ (ಇತರೆ) | 1 |
| | | | ಪ್ರವರ್ಗ–1 (ಇತರೆ) | 1 |
| | | | ಪ್ರವರ್ಗ–2ಎ (ಇತರೆ) | 2 |
| | | | ಪ್ರವರ್ಗ–2ಬಿ (ಇತರೆ) | 1 |
| 4 | ಕಸ ಗುಡಿಸುವವರು (ಒಣ/ಹಸಿ) | 14 | ಸಾ.ಅ (ಇತರೆ) | 5 |
| | | | ಸಾ.ಅ (ಗ್ರಾಮೀಣ) | 2 |
| | | | ಪ.ಜಾ (ಇತರೆ) | 2 |
| | | | ಪ.ಪಂ (ಇತರೆ) | 1 |

| | | | | |
|---|---|---|---|---|
| | | | ಪ್ರವರ್ಗ–1 (ಇತರೆ) | 1 |
| | | | ಪ್ರವರ್ಗ–2ಎ (ಇತರೆ) | 2 |
| | | | ಪ್ರವರ್ಗ–2ಬಿ (ಇತರೆ) | 1 |
| 5 | ನೀರು ತರುವವರು | 13 | ಸಾ.ಅ (ಇತರೆ) | 4 |
| | | | ಸಾ.ಅ (ಗ್ರಾಮೀಣ) | 2 |
| | | | ಪ.ಜಾ (ಇತರೆ) | 2 |
| | | | ಪ.ಪಂ (ಇತರೆ) | 1 |
| | | | ಪ್ರವರ್ಗ–1 (ಇತರೆ) | 1 |
| | | | ಪ್ರವರ್ಗ–2ಎ (ಇತರೆ) | 2 |
| | | | ಪ್ರವರ್ಗ–2ಬಿ (ಇತರೆ) | 1 |
| | **ಒಟ್ಟು** | **74** | | **74** |

ಸಹಿ/–
ಕಮಾಂಡೆಂಟ್, 12ನೇ ಪಡೆ,
ಕೆ.ಎಸ್.ಆರ್.ಪಿ, ತುಮಕೂರು.

## ಅನುಬಂಧ – ಬಿ

**ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಘಟಕದಲ್ಲಿ ಖಾಲಿಯಿರುವ ಅನುಯಾಯಿ (ಪುರುಷ) (ಮಿಕ್ಕುಳಿದ) ಮತ್ತು ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ಹುದ್ದೆಗಳನ್ನು ಒಳಗೊಂಡಂತೆ ಖಾಲಿ ಹುದ್ದೆಗಳ ವಿವರ.**

### ಎ) ಅಡುಗೆಯವರು:–

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|
| ಸಾಮಾನ್ಯ ವರ್ಗ | 38 | 11 | 01 | - | - | 26 |
| ಪರಿಶಿಷ್ಟ ಜಾತಿ | 15 | 02 | - | - | - | 13 |
| ಪರಿಶಿಷ್ಟ ಪಂಗಡ | 06 | - | - | - | - | 06 |
| ಪ್ರವರ್ಗ–1 | 06 | - | - | - | - | 06 |
| ಪ್ರವರ್ಗ–2ಎ | 11 | 01 | - | - | - | 10 |
| ಪ್ರವರ್ಗ–2ಬಿ | 03 | - | - | - | - | 03 |
| ಪ್ರವರ್ಗ–3ಎ | 01 | - | - | - | - | 01 |
| ಪ್ರವರ್ಗ–3ಬಿ | 01 | - | - | - | - | 01 |
| **ಒಟ್ಟು** | **81** | **14** | **01** | - | - | **66** |

### ಬಿ) ಕ್ಷೌರಿಕ:–

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|
| ಸಾಮಾನ್ಯ ವರ್ಗ | 22 | 06 | - | - | - | 16 |
| ಪರಿಶಿಷ್ಟ ಜಾತಿ | 08 | - | - | - | - | 08 |
| ಪರಿಶಿಷ್ಟ ಪಂಗಡ | 06 | - | - | - | - | 06 |
| ಪ್ರವರ್ಗ–1 | 05 | - | - | - | - | 05 |
| ಪ್ರವರ್ಗ–2ಎ | 03 | - | - | - | - | 03 |
| ಪ್ರವರ್ಗ–2ಬಿ | 01 | - | - | - | - | 01 |
| ಪ್ರವರ್ಗ–3ಎ | 0 | - | - | - | - | - |
| ಪ್ರವರ್ಗ–3ಬಿ | 0 | - | - | - | - | - |
| **ಒಟ್ಟು** | **45** | **06** | - | - | - | **39** |

### ಸಿ) ಧೋಬಿ:–

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|
| ಸಾಮಾನ್ಯ ವರ್ಗ | 25 | 06 | - | - | - | 19 |
| ಪರಿಶಿಷ್ಟ ಜಾತಿ | 09 | - | - | - | - | 09 |
| ಪರಿಶಿಷ್ಟ ಪಂಗಡ | 06 | - | - | - | - | 06 |
| ಪ್ರವರ್ಗ–1 | 05 | - | - | - | - | 05 |
| ಪ್ರವರ್ಗ–2ಎ | 05 | - | - | - | - | 05 |

| | | | | | | |
|---|---|---|---|---|---|---|
| ಪ್ರವರ್ಗ–2ಬಿ | 03 | - | - | - | - | 03 |
| ಪ್ರವರ್ಗ–3ಎ | - | - | - | - | - | - |
| ಪ್ರವರ್ಗ–3ಬಿ | - | - | - | - | - | - |
| **ಒಟ್ಟು** | **53** | **06** | - | - | - | **47** |

**ಡಿ) ಕಸ ಗುಡಿಸುವವರು (ಒಣ/ಹಸಿ):–**

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|
| ಸಾಮಾನ್ಯ ವರ್ಗ | 27 | 07 | - | - | - | 20 |
| ಪರಿಶಿಷ್ಟ ಜಾತಿ | 09 | - | - | - | - | 09 |
| ಪರಿಶಿಷ್ಟ ಪಂಗಡ | 06 | - | - | - | - | 06 |
| ಪ್ರವರ್ಗ–1 | 06 | - | - | - | - | 06 |
| ಪ್ರವರ್ಗ–2ಎ | 07 | - | - | - | - | 07 |
| ಪ್ರವರ್ಗ–2ಬಿ | 03 | - | - | - | - | 03 |
| ಪ್ರವರ್ಗ–3ಎ | - | - | - | - | - | - |
| ಪ್ರವರ್ಗ–3ಬಿ | - | - | - | - | - | - |
| **ಒಟ್ಟು** | **58** | **07** | - | - | - | **51** |

**ಇ) ನೀರು ತರುವವರು:–**

| ವರ್ಗ | ಒಟ್ಟು ಹುದ್ದೆಗಳ ಸಂಖ್ಯೆ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ | ಕನ್ನಡ ಮಾಧ್ಯಮ | ಇತರರು |
|---|---|---|---|---|---|---|
| ಸಾಮಾನ್ಯ ವರ್ಗ | 06 | 02 | - | - | - | 04 |
| ಪರಿಶಿಷ್ಟ ಜಾತಿ | 02 | - | - | - | - | 02 |
| ಪರಿಶಿಷ್ಟ ಪಂಗಡ | 01 | - | - | - | - | 01 |
| ಪ್ರವರ್ಗ–1 | 01 | - | - | - | - | 01 |
| ಪ್ರವರ್ಗ–2ಎ | 02 | - | - | - | - | 02 |
| ಪ್ರವರ್ಗ–2ಬಿ | 01 | - | - | - | - | 01 |
| ಪ್ರವರ್ಗ–3ಎ | - | - | - | - | - | 0 |
| ಪ್ರವರ್ಗ–3ಬಿ | - | - | - | - | - | 0 |
| **ಒಟ್ಟು** | **13** | **02** | - | - | - | **11** |

ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್,
ನೇಮಕಾತಿ, ಕಾರ್ಲಟನ್ ಭವನ,
ಅರಮನೆ ರಸ್ತೆ, ಬೆಂಗಳೂರು – 560001.

**(ಪ.ಜಾ/ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಡಿ**

(ನಿಯಮ 3ಎ (2) (3) ನೋಡಿ)

**ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ /ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ**

**ಪ್ರಮಾಣ ಪತ್ರ**

.................................................................. ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ............................. ಜಿಲ್ಲೆಯ/ ವಿಭಾಗದ ............................................. ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ .............. ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ ................................................ ಇವರು ಅನುಸೂಚಿತ ಜಾತಿ / ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ / ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

* ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲಕ ತಿದ್ದುಪಡಿಯಾದಂತೆ).

* ಸಂವಿಧಾನ
* ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
* ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿದಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
* ಸಂವಿಧಾನ (ದಾದರ್ ಮತ್ತು ನಗರ ಹವೇಲಿ) ಅನುಸೂಚಿತ ಜಾತಿಗಳ ಆದೇಶ, 1962
* ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
* ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ / ಬುಡಕಟ್ಟುಗಳ ಆದೇಶ 1988
* ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ / ಶ್ರೀಮತಿ / ಕುಮಾರಿ* ............................................................................................................... ಮತ್ತು / ಅಥವಾ ಅವನ* / ಅವಳ* ಕುಟುಂಬವು ...................................................................................... ರಾಜ್ಯ / ಕೇಂದ್ರಾಡಳಿತ ಪ್ರದೇಶದ ............................................... ಜಿಲ್ಲಾ / ವಿಭಾಗದ ............................ ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ ..................................................

ತಹಶೀಲ್ದಾರರು ..................................................

ಸ್ಥಳ :
ದಿನಾಂಕ :

ಪದನಾಮ
ಕಛೇರಿಯ ಮೊಹರಿನೊಂದಿಗೆ

**ರಾಜ್ಯ / ಕೇಂದ್ರಾಡಳಿತ ಪ್ರದೇಶ***

**ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ**

ಸೂಚನೆ : ಇಲ್ಲಿ ಉಪಯೋಗಿಸಿದ **"ಸಾಮಾನ್ಯ ನಿವಾಸಿಗಳೂ"** ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ. ಬಿಸಿ 12028 / 2/ 76–ಎಸ್‌ಸಿಟಿ–1 ಗೃಹ ಮಂತ್ರಾಲಯದ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ) ಪತ್ರ ಸಂಖ್ಯೆ 13.02.74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ 5ನೇ ಆಗಸ್ಟ್ 1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ, ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

**(ಪ್ರವರ್ಗ – 1ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಇ**

(ನಿಯಮ 3ಎ (2) (3) ನೋಡಿ)

**ಹಿಂದುಳಿದ ವರ್ಗಗಳಿಗೆ (ಪ್ರ.ವರ್ಗ–1) ಸೇರಿದ ಅಭ್ಯರ್ಥಿಗೆ ನೀಡುವ ಪ್ರಮಾಣ ಪತ್ರ**

.............................................................................................................. ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ / ಶ್ರೀಮತಿ ........................................................................................................ ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ ............................................................................................... ಇವರು ಹಿಂದುಳಿದ ವರ್ಗಗಳ (ಪ್ರವರ್ಗ) .................................................................... ಜಾತಿಯ ............................................. ಉಪ ಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ :
ದಿನಾಂಕ :

ತಹಶೀಲ್ದಾರರು
............................ ತಾಲ್ಲೂಕು
ಕಛೇರಿಯ ಮೊಹರು

**(ಪ್ರವರ್ಗ – 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಎಫ್**

(ನಿಯಮ 3ಎ (2) (3)ನ್ನು ನೋಡಿ)

**ಹಿಂದುಳಿದ ವರ್ಗಗಳಿಗೆ (2ಎ, 2ಬಿ, 3ಎ, 3ಬಿ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ**

................................................................... ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ .................................................. ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ/ಶ್ರೀಮತಿ/ಕುಮಾರಿ ........................................ ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು/ಪತ್ನಿ/ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರಿಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು ;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ/ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು ;

ಅಥವಾ

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ ;

ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ. 43100–83900/– ಪ್ರಾರಂಬಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು

ಅಥವಾ

ಆತನ/ಆಕೆಯ ತಂದೆ ತಾಯಿ/ಪೋಷಕರು/ಪತ್ನಿ/ಪತಿಯ ಆದಾಯವು ಎಂಟು ಲಕ್ಷ ಮೀರುವುದಿಲ್ಲವೆಂದು ;

ಅಥವಾ

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961ರಲ್ಲಿ ನಿಗದಿಪಡಿಸಿರುವಂತೆ ಆತನ/ಆಕೆಯ ತಂದೆ ತಾಯಿ/ಪೋಷಕರು/ಪತ್ನಿ/ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ/ಆಕೆಯ ತಂದೆ ತಾಯಿ/ಪೋಷಕ/ಪತ್ನಿ/ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣಿಕರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರ ಅನ್ವಯ ಶ್ರೀ/ಶ್ರೀಮತಿ/ಕುಮಾರಿ .................................. ಇವರು ....................................... ಜಾತಿಗೆ ......................................... ಸೇರಿದ ಉಪಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ ................................ (2ಎ, 2ಬಿ, 3ಎ, 3ಬಿ) ಸೇರಿರುತ್ತಾರೆ.

ಸ್ಥಳ :
ದಿನಾಂಕ :

ತಹಶೀಲ್ದಾರರು
............................ ತಾಲ್ಲೂಕು
ಕಛೇರಿಯ ಮೊಹರು

**ನಮೂನೆ–1**

**ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ**

(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

ಇವರಿಗೆ:
ತಹಶೀಲ್ದಾರರು,
..................... ತಾಲ್ಲೂಕು,
..................... ಜಿಲ್ಲೆ.

ಮಾನ್ಯರೆ,

ಶ್ರೀ / ಶ್ರೀಮತಿ ...................................................... ಎಂಬುವವರ ಮಗ/ಮಗಳು/ಪತಿ/ಪತ್ನಿ.............................. ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ:
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ :

   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು

9. ಆದಾಯ ತೆರಿಗೆ ಪಾವತಿದಾರರೇ ?
10. ಸಂಪತ್ತು ತೆರಿಗೆ ಪಾವತಿದಾರರೇ ?
11. ಮಾರಾಟ ತೆರಿಗೆ ಪಾವತಿದಾರರೇ ?

**ಪ್ರಮಾಣೀಕೃತ ಘೋಷಣೆ**

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ/ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ : ತಮ್ಮ ವಿಧೇಯ
ದಿನಾಂಕ : (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತಾ ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ.

ಸ್ಥಳ : ತಂದೆ/ತಾಯಿ/ಪೋಷಕರ ಸಹಿ
ದಿನಾಂಕ : (ತಂದೆ/ತಾಯಿ ಜೀವಂತವಿಲ್ಲದಿದ್ದರೆ)
(ಹೆಂಡತಿ/ಗಂಡ/ಇವರ ಸಹಿ)

**ಸ್ಥಳೀಯ ಇಬ್ಬರು ಸಾಕ್ಷಿದಾರರು**

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ 1)

(ಪೂರ್ಣ ವಿಳಾಸದೊಂದಿಗೆ) 2)

**ಪರಿಶೀಲನಾ ಪ್ರಮಾಣ ಪತ್ರ**

1. ಶ್ರೀ/ಶ್ರೀಮತಿ.............................................................................. ಎಂಬುವವರ ಮಗ/ಮಗಳು/ಪತಿ/ಪತ್ನಿ/ಶ್ರೀ/ಶ್ರೀಮತಿ/ಕುಮಾರಿ................................ ಎಂಬುವವರು ಕರ್ನಾಟಕ ರಾಜ್ಯದ ................................ ಜಿಲ್ಲೆಯ ವಿಭಾಗ ............................ ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ ........................................................ ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರರು
ದಿನಾಂಕ : ........................ ತಾಲ್ಲೂಕು
ಕಛೇರಿಯ ಮೊಹರು

**ಸೂಚನೆ–1**: ಇದರಲ್ಲಿ ಉಪಯೋಗಿಸಲಾದ **"**ಸಾಮಾನ್ಯ ನಿವಾಸಿ**"** ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.

**ಸೂಚನೆ–2**: ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ 31.01.1995 ರನ್ವಯ ಮೇಲುಸ್ತರ (Creamy Layer) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು.

**ನಮೂನೆ – 2**
**ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ**

ಶ್ರೀ / ಶ್ರೀಮತಿ ........................................................................ ರವರ ಮಗ/ಮಗಳು/ಪತ್ನಿ/ಶ್ರೀ/ಶ್ರೀಮತಿ/ಕುಮಾರಿ ................................................ ಜಿಲ್ಲೆ ............................. ತಾಲ್ಲೂಕು ............................... ಗ್ರಾಮದಲ್ಲಿ .......................... ವಾಸವಾಗಿರುವ ಇವರು ಒಂದನೇ ತರಗತಿಯಿಂದ ................................. ತರಗತಿಯವರೆಗೆ ....................................... ಜಿಲ್ಲೆ .................................. ತಾಲ್ಲೂಕು ............................... ಪಟ್ಟಣ ................................................. ಶಾಲೆಯಲ್ಲಿ ವ್ಯಾಸಂಗ ಮಾಡಿ ................................ ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕದ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ, 1964ರ ಅಡಿಯಲ್ಲಿ ನಿರ್ದಿಷ್ಟ ಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಸ್ಥಳ : ಮುಖ್ಯೋಪಾಧ್ಯಾಯರ ಸಹಿ
ದಿನಾಂಕ : ಮತ್ತು ಸಂಸ್ಥೆಯ ಪೂರ್ಣ ವಿಳಾಸವುಳ್ಳ ಮೊಹರು

ಮೇಲುರುಜು
ಕ್ಷೇತ್ರ ಶಿಕ್ಷಣಾಧಿಕಾರಿ

**ಕಲ್ಯಾಣ-ಕರ್ನಾಟಕ ಮೀಸಲಾತಿ ಬಯಸಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರ:**

**ಅನುಬಂಧ – ಎ**

**ಅರ್ಹತಾ ಪ್ರಮಾಣ ಪತ್ರ**

[ಅನುಚ್ಛೇದ 371 (ಜೆ) ಮೇರೆಗೆ]
(3(3)ನೇ ನಿಯಮ ನೋಡಿ)

[ಪ್ರಮಾಣ ಪತ್ರ ನೀಡಲು ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ – ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು, 2013]

ಶ್ರೀ / ಶ್ರೀಮತಿ ------------------ ರವರು -------------------- ರವರ ಮಗ / ಹೆಂಡತಿಯಾಗಿದ್ದು,
ಇವರು ಕರ್ನಾಟಕ ರಾಜ್ಯದ ------------------ ಜಿಲ್ಲೆಯ ----------------- ತಾಲ್ಲೂಕಿನ ------------------ ಗ್ರಾಮ / ಪಟ್ಟಣದ ಸ್ಥಳೀಯ ವ್ಯಕ್ತಿಯಾಗಿದ್ದಾರೆ.

ಸ್ಥಳ: -------------------- ಹೆಸರು --------------------
ದಿನಾಂಕ: ------------------ ಅಸಿಸ್ಟೆಂಟ್ ಕಮೀಷನರ್
-----------------ಉಪವಿಭಾಗ
-----------------ಜಿಲ್ಲೆ

(ಸಕ್ಷಮ ಪ್ರಾಧಿಕಾರಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ಅಂತಿಮ ದಿನಾಂಕದಂದು ಅಭ್ಯರ್ಥಿಯು ಸಾರ್ವಜನಿಕ ಉದ್ಯೋಗ ಆದೇಶದಂತೆ ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆದಿರುತ್ತಾನೆಂದು ಒಂದು ಅಡಿ ಟಿಪ್ಪಣಿಯನ್ನು ದಾಖಲಿಸುವುದು.)

**ಅನುಬಂಧ – ಡಿ**

**ಸ್ವಗ್ರಾಮ ಪ್ರಮಾಣಪತ್ರ**

(Home Town Certificate)

[ಅನುಚ್ಛೇದ 371 (ಜೆ) ಮೇರೆಗೆ]

(4 (ಇ) ನಿಯಮ ನೋಡಿ)

[ ಪ್ರಮಾಣಪತ್ರಗಳ ನೀಡಿಕೆಗಾಗಿ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಬಾದ್ – ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು, 2013]

ಶ್ರೀ / ಶ್ರೀಮತಿ ------------------ ರವರು -------------------- ರವರ ಮಗ / ಹೆಂಡತಿಯಾಗಿದ್ದು, ಇವರು ಕರ್ನಾಟಕ ರಾಜ್ಯದ ------------------ ಜಿಲ್ಲೆಯ ----------------- ತಾಲ್ಲೂಕಿನ ------------------- ಗ್ರಾಮ / ಪಟ್ಟಣವನ್ನು ತನ್ನ ಸ್ವಗ್ರಾಮ / ಸ್ಥಳ ಎಂದು ತನ್ನ ಸೇವಾ ಪುಸ್ತಕದಲ್ಲಿ ಘೋಷಿಸಿರುತ್ತಾರೆ.

ಸೇವಾ ಪುಸ್ತಕದಲ್ಲಿರುವ ನಮೂದನ್ನು ನಾನು ಖುದ್ದಾಗಿ ಪರಿಶೀಲಿಸಿದ್ದೇನೆ ಮತ್ತು ಮೇಲಿನ ನಮೂದು 01–01–2013ಕ್ಕೆ ಮುಂಚೆ ಸೇವಾ ಪುಸ್ತಕದಲ್ಲಿ ನಮೂದು ಮಾಡಲಾಗಿತ್ತೆಂದು ಸ್ವತಃ ಮನವರಿಕೆ ಮಾಡಿಕೊಂಡಿರುತ್ತೇನೆ.

ಸ್ಥಳ: -------------------------

ದಿನಾಂಕ: -----------------

ಹೆಸರು: ---------------------------

ಪದನಾಮ ------------------

ಕಛೇರಿ --------------

ಇಲಾಖೆ-------------